ಸಂಪುಟ : 9 ಸಂಚಿಕೆ 265 ಪುಟ : 4 ಬೆಲೆ: 3.00 ರವಿವಾರ ಡಿಸೆಂಬರ್ 1 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 265 Pages : 4 Price : 3.00 Sunday December 1 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಪ್ರೈಮ್ ಸ್ಪೋರ್ಟ್ಸ್ ಪಾರ್ಕ್ ಸಂಸ್ಥೆಯ ಸುಸಜ್ಜಿತ ಕ್ರೀಡಾಂಗಣ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರಕ್ಕೆ ಉತ್ತಮ ಕ್ರೀಡಾ ಸೌಲಭ್ಯ ದೊರಕಿಸಿದ ಪ್ರೈಮ್ ಸ್ಪೋರ್ಟ್ಸ್ ಪಾರ್ಕ್ ಸಂಸ್ಥೆಯ ಕಾರ್ಯ ಶ್ಲಾಘನೀಯ. ನಗರದ ಪಾಲಿಗೆ ಇದೊಂದು ಉತ್ತಮ ಸೌಲಭ್ಯವಾಗಿದೆ. ಹಣ ಎಲ್ಲರಲ್ಲೂ ಇರುತ್ತದೆ. ಆದರೆ, ಉತ್ತಮ ಕಾರ್ಯಗಳಿಗಾಗಿ ಹಣ ಬಳಸುವ ಆಲೋಚನೆ ಎಲ್ಲರಲ್ಲೂ ಬರುವುದಿಲ್ಲ. ಅಂತಹ ಉತ್ತಮ ಕಾರ್ಯಕ್ರಮವನ್ನು ಪ್ರೈಮ್ ಸ್ಪೋರ್ಟ್ಸ್ ಪಾರ್ಕ್ ನಡೆಸಿದೆ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೆಮ್ಮೆ ವ್ಯಕ್ತಪಡಿಸಿದರು. ನಗರದ ಕಳಸಾಪೂರ ರಿಂಗ್ ರಸ್ತೆಯಲ್ಲಿ ಶನಿವಾರ ಪ್ರೈಮ್ ಸ್ಪೋರ್ಟ್ಸ್ ಪಾರ್ಕ್ ಸಂಸ್ಥೆಯ ಬಾಕ್ಸ್ ಟರ್ಫ್ ಕ್ರಿಕೆಟ್ ಮತ್ತು ಫುಟ್‌ಬಾಲ್ ಕ್ರೀಡಾಂಗಣವನ್ನು ಉದ್ಘಾಟಿಸಿ ಅವರು ಮಾತನಾಡಿದರು. ನಗರದಲ್ಲಿ ಎಲ್ಲ ಕ್ರೀಡೆಗಳ ಅಂಗಣಗಳನ್ನು ಅಭಿವೃದ್ಧಿಪಡಿಸಲಾಗಿದೆ. ಲಾಂಗ್ ಟೆನ್ನಿಸ್ ಕ್ರೀಡೆಗಾಗಿ ಒಂದು ಗ್ರೌಂಡ್ ಅಭಿವೃದ್ಧಿಪಡಿಸಲಾಗುವುದು. ಈ ಬಗ್ಗೆ ಸೂಕ್ತ ಸ್ಥಳದ ಹುಡುಕಾಟ ನಡೆಸಲಾಗುತ್ತಿದೆ. ಗದುಗಿನಲ್ಲಿ ಕ್ರೀಡಾಕ್ಷೇತ್ರಕ್ಕೆ ಪೂರಕವಾಗಿ ಸಾಕಷ್ಟು ಸೌಲಭ್ಯಗಳಿವೆ. ಇಲ್ಲಿ ಕ್ರೀಡಾ ಪ್ರತಿಭೆಗಳಿಗೂ ಕೊರತೆ ಇಲ್ಲ. ಸರ್ಕಾರದಿಂದ ದೊರೆಯುವ ಎಲ್ಲ ಸೌಲಭ್ಯಗಳನ್ನು ಒದಗಿಸಲಾಗುವುದು. ಹಲವು ಕ್ರೀಡಾಪಟುಗಳಿಗೆ ಪ್ರತಿಭೆ ಇದ್ದರೂ ಪ್ರೋತ್ಸಾಹದ ಕೊರತೆ ಇರುತ್ತದೆ. ಶ್ರೀಮಂತ ಸಮಾಜ ಅಂತಹ ಪ್ರತಿಭೆಗಳನ್ನು ಪ್ರೋತ್ಸಾಹಿಸಬೇಕು ಎಂದರು. ಈ ಸಂದರ್ಭದಲ್ಲಿ ಎಸ್.ಎಚ್. ಶಿವನಗೌಡರ್, ಕರಿಬಸಪ್ಪ ಹಂಚಿನಾಳ, ಕಿರಣ ಭೂಮಾ, ರೂಪಚಂದ ಪಾಲರೇಚ, ವರ್ಧಮನ ಜೈನ್, ರಾಜು ಗುಡಿಮನಿ, ಅಕ್ಬರ್ ಸಾಬ್ ಬಬರ್ಚಿ, ಅನಿರುದ್ಧ ಜೋಶಿ, ಶಿವಕುಮಾರಗೌಡ ಪಾಟೀಲ, ರಾಜು ಕುರಡಗಿ, ಸಿದ್ದು ಪಾಟೀಲ, ಸದಾಶಿವ ಮದರಿಮಠ, ನಾರಾಯಣ ಕುಡುತರ, ರಾಘವೇಂದ್ರ ಬಾರಡ, ಸಂತೋಷ ಚೆನ್ನಪ್ಪನ್ನವರ ಸೇರಿದಂತೆ ಮುಂತಾದವರು ಇದ್ದರು.

> ಮಾಜಿ ಸಚಿವ ಶ್ರೀರಾಮುಲು ಮಾತನಾಡಿ, ದತ್ತಾ ಗ್ರೂಪ್ ಸಂಸ್ಥೆ ಸಾಮಾಜಿಕ ಸೇವೆಯಲ್ಲಿ ತನ್ನನ್ನು ತಾನು ತೊಡಗಿಸಿಕೊಂಡಿದೆ. ನಗರದ ಯುವಕರಿಗೆ, ಕ್ರೀಡಾಸಕ್ತರಿಗೆ ಈ ಕ್ರೀಡಾಂಗಣ ಅನುಕೂಲವಾಗಲಿದೆ. ಅಭಿವೃದ್ಧಿ ಹೊಂದುತ್ತಿರುವ ನಗರಗಳಲ್ಲಿ ಗದಗ ಕೂಡ ಒಂದು. ಕ್ರೀಡಾಸಕ್ತರು ಇಂತಹ ಯೋಜನೆಗಳಿಗೆ ಹೆಚ್ಚಿನ ಸಹಕಾರ ನೀಡಬೇಕು. ಗದುಗಿನಲ್ಲಿ ಪ್ರತಿಭೆಗಳಿಗೆ ಕೊರತೆ ಇಲ್ಲ. ಆದರೆ ಅವಕಾಶಗಳನ್ನು ಸೃಷ್ಟಿಸುವ ಅಗತ್ಯವಿದೆ. ಈ ಸದವಕಾಶವನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ತಿಳಿಸಿದರು.

ಕ್ರಿಮಿನಲ್ ಕೆಲಸ ಮಾಡಿ ಜೈಶ್ರೀರಾಮ ಅಂದ್ರೆ ಎಲ್ಲವೂ ಮುಚ್ಚಿ ಹೋಗುತ್ತಾ?

■ ವಿಜಯಸಾಕ್ಷಿ ಸುದ್ದಿ, ಕಲಬುರಗಿ

ಕ್ರಿಮಿನಲ್ ಕೆಲಸ ಮಾಡಿ ಜೈ ಶ್ರೀರಾಮ ಅಂದ್ರೆ ಎಲ್ಲವೂ ಮುಚ್ಚಿ ಹೋಗುತ್ತಾ? ಎಂದು ಸಚಿವ ಪ್ರಿಯಾಂಕ್ ಖರ್ಗೆ ಲೇವಡಿ ಮಾಡಿದ್ದಾರೆ. ನಗರದಲ್ಲಿ ಮಾತನಾಡಿದ ಅವರು, ಯತ್ನಾಳ್ ಬಸವಣ್ಣ ಅವರನ್ನ ಹೇಡಿ ಎನ್ನುತ್ತಾರೆ. ಇದಕ್ಕೆ ಬಿಜೆಪಿಯ ಒಬ್ಬರೂ ಈವರೆಗೆ ತುಟಿ ಬಿಚ್ಚಿಲ್ಲ.

ಇಷ್ಟೆಲ್ಲಾ ವಿದ್ಯಮಾನಗಳು ನಡೆಯುತ್ತಿದ್ದಾಗ್ಯೂ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಎಲ್ಲಿದ್ದಾರೋ ಗೊತ್ತಾಗುತ್ತಿಲ್ಲ. ಬಸವಣ್ಣ ಅಂದ್ರೆ ನಿಮಗೆ ಅಷ್ಟೊಂದು ಅಲರ್ಜಿನಾ? ಕ್ರಿಮಿನಲ್ ಕೆಲಸ ಮಾಡಿ ಜೈ ಶ್ರೀರಾಮ ಅಂದ್ರೆ ಎಲ್ಲವೂ ಮುಚ್ಚಿ ಹೋಗುತ್ತಾ? ಎಂದು ಖರ್ಗೆ ಲೇವಡಿ ಮಾಡಿದ್ದಾರೆ.

ಇನ್ನೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಚಿವ ಸಂಪುಟ ಪುನಾರಚನೆ ಕುರಿತು ಚರ್ಚಿಸಲು ದೆಹಲಿಗೆ ಹೋಗಿರಲಿಲ್ಲ. ಪ್ರಿಯಾಂಕಾ ಗಾಂಧಿ ಇತ್ತೀಚೆಗೆ ನೂತನ ಸಂಸದರಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಅವರಿಗೆ ಶುಭಾಶಯ ಕೋರಲು ತೆರಳಿದ್ದರು. ಈ ವೇಳೆ ಮುಖ್ಯಮಂತ್ರಿಗಳು ಎಐಸಿಸಿ ಅಧ್ಯಕ್ಷರನ್ನು ಸಹಜವಾಗಿ ಭೇಟಿ ಮಾಡಿದ್ದಾರೆ ಅಷ್ಟೇ ಎಂದರು.

ಪೊಲೀಸ್ ವಾರ್ಷಿಕ ಕ್ರೀಡಾಕೂಟಕ್ಕೆ ಚಾಲನೆ ನೀಡಿದ ಡಾ. ಈಶ್ವರ ಉಳ್ಳಾಗಡ್ಡಿ

ನಿತ್ಯದ ಜೀವನದಲ್ಲಿ ವ್ಯಾಯಾಮ ಮುಖ್ಯ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಪ್ರತಿ ದಿನ ಒತ್ತಡದ ನಡುವೆ ಕಾರ್ಯ ನಿರ್ವಹಿಸುತ್ತಿರುತ್ತೇವೆ. ಒತ್ತಡ ನಿವಾರಣೆ ಹಾಗೂ ಸದೃಢ ಆರೋಗ್ಯ ಹೊಂದಲು ದಿನನಿತ್ಯದ ಜೀವನದಲ್ಲಿ ವ್ಯಾಯಾಮ ಅತೀ ಮುಖ್ಯ ಎಂದು ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತರಾದ ಡಾ.ಈಶ್ವರ ಉಳ್ಳಾಗಡ್ಡಿ ಹೇಳಿದರು.

ಶನಿವಾರ ಕಾರವಾರ ರಸ್ತೆಯ ಹಳೆಯ ಸಶಸ್ತ್ರ ಮೀಸಲು ಪಡೆಯ ಕವಾಯತು ಮೈದಾನದಲ್ಲಿ ಹುಬ್ಬಳ್ಳಿ-ಧಾರವಾಡ ಪೊಲೀಸ್ ಆಯುಕ್ತಾಲಯ ಘಟಕದ ವತಿಯಿಂದ ಆಯೋಜಿಸಿದ್ದ ಪೊಲೀಸ್ ವಾರ್ಷಿಕ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪೊಲೀಸರು ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು. ದೈಹಿಕ ಮತ್ತು ಮಾನಸಿಕವಾಗಿ ಸದೃಢರಾಗಲು ಕ್ರೀಡೆಗಳು ಸಹಾಯಕವಾಗಿವೆ. ದಿನನಿತ್ಯ ವ್ಯಾಯಾಮಕ್ಕೆ ಒತ್ತು ನೀಡಬೇಕಾಗಿದೆ. ಯಾವುದಾದರೂ ಒಂದು ಕ್ರೀಡೆಯನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸದೃಢರಾದಾಗ ಮಾತ್ರ ಉತ್ತಮ ಕೆಲಸ ನಿರ್ವಹಿಸಲು ಸಾಧ್ಯವಾಗುತ್ತದೆ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಬ್ಯಾಕೋಡ ಮಾತನಾಡಿ, ಪೊಲೀಸ್ ವಾರ್ಷಿಕ ಕ್ರೀಡಾಕೂಟಕ್ಕೆ ಉತ್ತಮ ಮೆರುಗು ತರಲಾಗಿದೆ. ಪೊಲೀಸರು ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳುವುದರ ಕಡೆಗೆ ಹೆಚ್ಚಿನ ಒತ್ತು ನೀಡಬೇಕಾಗಿದೆ ಎಂದರು.

ಹುಬ್ಬಳ್ಳಿ-ಧಾರವಾಡ ಮಹಾನಗರ ಪೊಲೀಸ್ ಆಯುಕ್ತರಾದ ಎನ್ ಶಶಿಕುಮಾರ್ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿ, ಕಾನೂನು ಸುವ್ಯವಸ್ಥೆ ಕಾಪಾಡುವ ಹೊಣೆ ಎಲ್ಲರ ಮೇಲಿದೆ. ಶ್ರಮ ವಹಿಸಿ ಕರ್ತವ್ಯ ನಿರ್ವಹಿಸಬೇಕು ಎಂದರು.

▸▸ ೩ನೇ ಪುಟಕ್ಕೆ

> ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಡಾ. ಸಂತೋಷಕುಮಾರ ಬಿರಾದಾರ್ ಮಾತನಾಡಿ, ಕ್ರೀಡಾ ಸ್ಫೂರ್ತಿಯನ್ನು ಮೆರೆಯಲು ಕ್ರೀಡಾಕೂಟ ಉತ್ತಮ ವೇದಿಕೆಯಾಗಿದೆ. ಕ್ರೀಡಾಕೂಟದಲ್ಲಿ ಭಾಗವಹಿಸಿದ ಹಳೆಯ ನೆನಪುಗಳು ಮರಳಿ ಬರುತ್ತಿವೆ. ಶಿಸ್ತುಬದ್ಧವಾಗಿ ಕ್ರೀಡಾಕೂಟ ಆಯೋಜನೆ ಮಾಡಲಾಗಿದೆ. ಪೊಲೀಸರು ಕ್ರೀಡಾಕೂಟದಲ್ಲಿ ಭಾಗವಹಿಸುವುದರ ಮೂಲಕ ಸದೃಢರಾಗಬೇಕು. ದೈಹಿಕ ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

ಗದಗ ಜಿಲ್ಲಾ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆ ಕಾರ್ಯಾಗಾರದಲ್ಲಿ ಸಚಿವ ಎಚ್.ಕೆ. ಪಾಟೀಲ

ಶಿಕ್ಷಣದ ಕುರಿತು ಆತ್ಮಾವಲೋಕನ ಮಾಡಿಕೊಳ್ಳಬೇಕಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಶೈಕ್ಷಣಿಕ ಸುಧಾರಣೆಯ ಕಾರ್ಯಕ್ರಮದ ಮೂಲಕ ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶವನ್ನು ಒಂದಕಿ ಸ್ಥಾನವನ್ನಾಗಿಸಲು ಎಲ್ಲರೂ ಪ್ರಾಮಾಣಿಕವಾಗಿ ಶ್ರಮವಹಿಸಬೇಕೆಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ನಗರದ ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಶನಿವಾರ ಜರುಗಿದ ಗದಗ ಜಿಲ್ಲಾ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆ ಕುರಿತ ಕಾರ್ಯಾಗಾರ ಹಾಗೂ ಶೈಕ್ಷಣಿಕ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶ ಕಡಿಮೆ ಬಂದಾಗ ಮುಜುಗರಕ್ಕೆ ಈಡಾಗುವ ಸಂದರ್ಭ ಬರುತ್ತದೆ. ನಮ್ಮ ಶಿಕ್ಷಣದ ಕುರಿತು ಎಲ್ಲರೂ ಆತ್ಮಾವಲೋಕನ ಮಾಡಿಕೊಳ್ಳಬೇಕಾಗಿದೆ. ಶಿಕ್ಷಕರು ಪ್ರಾಮಾಣಿಕವಾಗಿ ಹಾಗೂ ಗಂಭೀರವಾಗಿ ಕೆಲಸ ಮಾಡುತ್ತಿದ್ದಾರೆ. ಶಿಕ್ಷಕರ ಕಾರ್ಯಕ್ರಮದ ಪಟ್ಟಿ ಗಮನಿಸಿದರೆ ಎಲ್ಲಾ ಶಿಕ್ಷಕರು ಸಮಯ ಮೀರಿ ಕೆಲಸ ಮಾಡುತ್ತಿದ್ದಾರೆ. ಶಾಲೆಗಳನ್ನು ಅಧಿಕಾರಿಗಳಿಗೆ ದತ್ತು ನೀಡಲಾಗಿದೆ, ಅಧಿಕಾರಿಗಳು ಮಾರ್ಗದರ್ಶನ ನೀಡಿ ಶಿಕ್ಷಣದ ಗುಣಮಟ್ಟವನ್ನು ಸುಧಾರಣೆ ಮಾಡಬೇಕು. ತಾಲೂಕುವಾರು, ವಿಷಯವಾರು ಸಭೆ ಸಂಘಟನೆ ಮಾಡಿ ಕಾರ್ಯಾಗಾರವನ್ನು ಏರ್ಪಡಿಸಲಾಗಿದೆ ಎಂದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಕಲಿಯುವ ಅವಶ್ಯಕತೆ ಇರುವ ಮಕ್ಕಳು ಖಂಡಿತವಾಗಿ ಶಾಲೆಗೆ ತಪ್ಪದೇ ಬರುತ್ತಾರೆ. ಶಿಕ್ಷಕರು ಆಸಕ್ತಿಯಿಂದ ಪಾಠ ಮಾಡಲು ಅನುಕೂಲಕರ ವಾತಾವರಣ ನಿರ್ಮಿಸಬೇಕು. ಶೈಕ್ಷಣಿಕ ಕ್ಷೇತ್ರದಲ್ಲಿ ಮೂಲ ಸಮಸ್ಯೆಗಳನ್ನು ಕಂಡುಹಿಡಿದು ಅದಕ್ಕೆ ಪರಿಹಾರ ಕಂಡುಕೊಳ್ಳಬೇಕು. ಶಿಕ್ಷಕರು ಮಾನಸಿಕವಾಗಿ ನೆಮ್ಮದಿಯಿಂದ ಇದ್ದಾಗ ಮಾತ್ರ ಉತ್ತಮ ಪಾಠ ಬೋಧನೆ ಆಗುತ್ತದೆ. ಮಕ್ಕಳು ಹಿರಿಯರಿಗೆ ಗೌರವ ನೀಡುವಂತಹ ಸಂಸ್ಕಾರಯುತ ಶಿಕ್ಷಣವನ್ನು ಪಡೆಯುವಂತಾಗಬೇಕು ಎಂದರು.

ಶ್ರೀ ಜಗದ್ಗುರು ತೋಂಟದಾರ್ಯ ಸಂಸ್ಥಾನಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದರು. ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಶಿವಾನಂದ ಎಸ್.ಪಟ್ಟಣಶೆಟ್ಟರ ಕಾರ್ಯಾಗಾರದ ಕುರಿತು ಮಾತನಾಡಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಕನಕದಾಸ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ರವಿ ದಂಡಿನ, ವಿದ್ಯಾದಾನ ಶಿಕ್ಷಣ ಸಮಿತಿ ಅಧ್ಯಕ್ಷ ಧೀರೇಂದ್ರ ಹುಯಿಲಗೋಳ, ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಆರ್. ಭಟ್, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ (ಅಭಿವೃದ್ಧಿ) ಜಿ.ಎಲ್. ಬಾರಾಟಕ್ಕೆ, ಡಾ. ಶರಣು ಗೋಗೇರಿ, ವಿವಿಧ ಕ್ಷೇತ್ರ ಶಿಕ್ಷಣಾಧಿಕಾರಿಗಳು, ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘದ ಜಿಲ್ಲಾ ಹಾಗೂ ತಾಲೂಕು ಘಟಕದ ಪದಾಧಿಕಾರಿಗಳು, ಶಿಕ್ಷಕರು ಹಾಜರಿದ್ದರು.

> ಶಿಕ್ಷಕರು ಮಾದರಿ ಪರೀಕ್ಷೆಯನ್ನು ತಯಾರು ಮಾಡಿ ಮಕ್ಕಳ ಪ್ರಗತಿಗೆ ಗಮನ ನೀಡಿದ್ದಾರೆ. ಅಕ್ಟೋಬರ್ ರಜಾ ಅವಧಿಯಲ್ಲಿ ವಿಶೇಷ ತರಗತಿಗಳನ್ನು ನಡೆಸಲಾಗಿದೆ. ಶಿಕ್ಷಕರು ಪೋಷಕರನ್ನೊಳಗೊಂಡು ಆಪ್ತ ಸಮಾಲೋಚನೆ ಮಾಡಿ ವೈಯಕ್ತಿಕ ಕಾಳಜಿ ವ್ಯಕ್ತಪಡಿಸಿ ಪ್ರತಿ ಸೋಮವಾರ ಪಾಲಕರ ಸಭೆ, ಮೂರನೇ ಸೋಮವಾರ ತಾಯಂದಿರ ಜೊತೆ ಸಭೆ ಮಾಡಿರುವುದು ಮೆಚ್ಚುವ ಕಾರ್ಯ. ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘ ಸಂಪೂರ್ಣ ಸಹಕಾರ ನೀಡಿದೆ.
>
> – ಎಚ್.ಕೆ. ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು.

> ವಿ.ಪ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಫಲಿತಾಂಶ ಕಡಿಮೆಯಾದ ಸಂದರ್ಭದಲ್ಲಿ ಟೀಕೆ ಟಿಪ್ಪಣಿಗಳನ್ನು ಶಿಕ್ಷಕರ ಮೇಲೆ ಹೊರಿಸುತ್ತಾರೆ. ಫಲಿತಾಂಶ ಕಡಿಮೆ ಆಗಲು ಕೇವಲ ಶಿಕ್ಷಕರು ಮಾತ್ರ ಕಾರಣವಲ್ಲ. ಮಗುವಿಗೆ ಪ್ರಾಥಮಿಕ ಹಂತದಲ್ಲಿಯೇ ಗುಣಮಟ್ಟದ ಮೌಲ್ಯಯುತ ಶಿಕ್ಷಣ ನೀಡಿದಾಗ ಅಂತಹ ಮಗುವು ಮುಂದಿನ ವ್ಯಾಸಂಗದಲ್ಲಿಯೂ ಉತ್ತಮ ಫಲಿತಾಂಶ ಕಾಣಬಹುದು ಎಂದರು.

ಫಲಾನುಭವಿಗಳಿಗೆ 3.5 ಲಕ್ಷ ರೂ ಮೌಲ್ಯದ ಕೃಷಿ ಪರಿಕರಗಳನ್ನು ವಿತರಿಸಿದ ಶಾಸಕ ಜಿ.ಎಸ್. ಪಾಟೀಲ

ಕಾಂಗ್ರೆಸ್ ಸರ್ಕಾರದಿಂದ ರೈತಪರ ಯೋಜನೆ

■ ವಿಜಯಸಾಕ್ಷಿ ಸುದ್ದಿ, ರೋಣ

ನಾಡಿನ ರೈತರ ಹಿತ ಕಾಯುವುದು ನಮ್ಮ ಸರಕಾರದ ಅದ್ಯ ಕರ್ತವ್ಯವಾಗಿದ್ದು, ಈ ನಿಟ್ಟಿನಲ್ಲಿ ಕಾಂಗ್ರೆಸ್ ಸರಕಾರ ತನ್ನ ಆಡಳಿತವನ್ನು ನಡೆಸುತ್ತಿದೆ ಎಂದು ಖನಿಜ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಶಾಸಕರ ಜನಸಂಪರ್ಕ ಕಾರ್ಯಾಲಯದ ಬಯಲು ಜಾಗೆಯಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಆಯ್ಕೆಗೊಂಡ ಫಲಾನುಭವಿಗಳಿಗೆ 3.5 ಲಕ್ಷ ರೂ ಮೌಲ್ಯದ ಕೃಷಿ ಪರಿಕರಗಳನ್ನು ವಿತರಿಸಿ ಮಾತನಾಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಸರಕಾರ ಆಡಳಿತಕ್ಕೆ ಬಂದಾಗ ರೈತರ ಏಳ್ಗೆಯನ್ನು ಬಯಸಿ ಅವರಿಗೆ ಅನುಕೂಲವಾಗುವ ಕಾರ್ಯಕ್ರಮಗಳನ್ನು ರೂಪಿಸಿ ರೈತರಿಗೆ ಶಕ್ತಿ ತುಂಬುವ ಕೆಲಸವನ್ನು ಮಾಡಿದ್ದು ಇತಿಹಾಸ. ಈ ಬಾರಿಯೂ ಸಹ ರೈತರ ಪರವಾಗಿ ಅನೇಕ ಯೋಜನೆಗಳನ್ನು ರೂಪಿಸಲಾಗಿದ್ದು, ಈಗಾಗಲೇ ಅವುಗಳನ್ನು ಫಲಾನುಭವಿಗಳಿಗೆ ತಲುಪಿಸುವ ಕಾರ್ಯವನ್ನು ಮಾಡಲಾಗುತ್ತಿದೆ ಎಂದರು.

ಈ ಹಿಂದೆ ಕೃಷಿ ಭಾಗ್ಯ ಯೋಜನೆಯು ರೈತರಿಗೆ ಶಕ್ತಿಯನ್ನು ನೀಡುವಲ್ಲಿ ಅತ್ಯಂತ ಪ್ರಮುಖ ಪಾತ್ರ ವಹಿಸಿತ್ತು.

▸▸ ೩ನೇ ಪುಟಕ್ಕೆ

> ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ರೋಣ, ಡಂಬಳ ಸೇರಿ ಒಟ್ಟು 12 ಫಲಾನುಭವಿಗಳನ್ನು ಗುರುತಿಸಲಾಗಿದೆ. ಅರ್ಹ ಫಲಾನುಭವಿಗಳಿಗೆ ಕೃಷಿ ಪರಿಕರಗಳನ್ನು ಈಗಾಗಲೇ ವಿತರಣೆ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಫಲಾನುಭವಿಗಳಿಗೆ ಯೋಜನೆಯಡಿಯಲ್ಲಿ ಕೃಷಿ ಪರಿಕರಗಳನ್ನು ವಿತರಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ.
>
> – ಜಿ.ಎಸ್. ಪಾಟೀಲ.
> ಶಾಸಕರು, ರೋಣ.

ಸಂಪಾದಕೀಯ

ಬಿಜೆಪಿ ಬಣ ರಾಜಕಾರಣ

ರಾಜ್ಯದ ಮೂರು ವಿಧಾನಸಭೆ ಕ್ಷೇತ್ರಗಳ ಉಪಚುನಾವಣೆ ಫಲಿತಾಂಶದ ನಂತರ ಭಾರತೀಯ ಜನತಾ ಪಕ್ಷದಲ್ಲಿ ಬಣ ರಾಜಕಾರಣದ ಬೇಗುದಿ ಶುರುವಾಗಿದೆ. ಬಿಜೆಪಿಯ ರೆಬಲ್ ನಾಯಕ ಬಸನಗೌಡ ಪಾಟೀಲ ಯತ್ನಾಳ ಆರಂಭಿಸಿರುವ ವಕ್ಫ್ ಹೋರಾಟ ಬಿಜೆಪಿಯಲ್ಲಿ ಮನೆಯೊಂದು ಎರಡು ಬಾಗಿಲ ಎನ್ನುವುದು ಮೇಲ್ನೋಟಕ್ಕೆ ಕಾಣುತ್ತಿದೆ. ಆದರೆ ಸದ್ಯ ಮನೆಯೊಂದು ಮೂರು ಬಾಗಿಲು ಆಗಿರುವುದು ಸ್ಪಷ್ಟವಾಗುತ್ತಿದೆ.

ವಿಜಯೇಂದ್ರ ಅವರು ಬಿಜೆಪಿ ರಾಜ್ಯಾಧ್ಯಕ್ಷರಾದಾಗಿನಿಂದ ಬಸನಗೌಡ ಪಾಟೀಲ ಯತ್ನಾಳ ತಮ್ಮ ಅಸಮಾಧಾನ ಹೊರಹಾಕುತ್ತಲೆ ಇದ್ದಾರೆ. ಅಷ್ಟೆ ಏಕೆ, ಯಡಿಯೂರಪ್ಪ ಮುಖ್ಯಮಂತ್ರಿ ಆಗಿದ್ದಾಗಿನಿಂದ ರೆಬಲ್ ನಾಯಕರಾಗಿಯೇ ಗುರುತಿಸಿಕೊಂಡಿದ್ದಾರೆ. ಆದರೂ ಹೈಕಮಾಂಡ್ ಅವರ ವಿರುದ್ಧ ಯಾವುದೇ ಕ್ರಮ ಕೈಗೊಂಡಿಲ್ಲ.

ಇತ್ತ ವಿಜಯೇಂದ್ರ ಬೆಂಬಲಿಗರು ಈಗ ಮೈ ಕೊಡವಿ ಎದ್ದುನಿಂತ ಯತ್ನಾಳ ವಿರುದ್ಧ ನಾಲಿಗೆ ಹರಿಬಿಡುತ್ತಿದ್ದಾರೆ. ಅಪ್ಪ-ಮಕ್ಕಳಿಗೆ ತಮ್ಮ ಸ್ವಾಮಿ ನಿಷ್ಠೆ ತೋರಿಸಲು ರೇಣುಕಾಚಾರ್ಯ ಬಣ ಮುಂದಾಗಿದೆ. ಈ ಬಣ ವಿಜಯೇಂದ್ರ ಬೆಂಬಲಿಸಿ, ಯತ್ನಾಳ ವಿರುದ್ಧ ಟೀಕಾ ಪ್ರಹಾರ ಆರಂಭಿಸಿದೆ. ಆದರೆ ಈ ಬಣದ ಸದಸ್ಯರೆಲ್ಲರೂ ಮಾಜಿ ಶಾಸಕರೆ. ಚುನಾವಣೆಯಲ್ಲಿ ಸೋತು ಸಣ್ಣವಾಗಿರುವ ನಾಯಕರು ಮುಂದಿನ ಚುನಾವಣೆ ಟಿಕೆಟ್ ಗಾಗಿ ವಿಜಯೇಂದ್ರ ಪರ ಧ್ವನಿ ಮೊಳಗಿಸುತ್ತಿದ್ದಾರೆ.

ಆದರೆ ಅಧಿಕಾರದಲ್ಲಿರುವ, ಅಂದರೆ ಪ್ರತಿಪಕ್ಷ ನಾಯಕ ಆರ್. ಅಶೋಕ ಆದಿಯಾಗಿ ಯಾರೊಬ್ಬರೂ ಯತ್ನಾಳ ವಿರುದ್ಧ ಮಾತಾಡುತ್ತಿಲ್ಲ. ಕೇಂದ್ರದಲ್ಲಿ ಮಂತ್ರಿಯಾಗಿರುವ ಪ್ರಹ್ಲಾದ ಜೋಶಿ ಸಹ ಯತ್ನಾಳ ವಿರುದ್ಧ ಒಂದೇ ಒಂದು ಶಬ್ಧ ಮಾತಾಡುತ್ತಿಲ್ಲ. ಶಿಗ್ಗಾಂವಿಯಲ್ಲಿ ಭರತ್ ಬೊಮ್ಮಾಯಿ ಸೋಲಿಗೂ ಯತ್ನಾಳ ಕಾರಣ ಎಂದು ರೇಣುಕಾಚಾರ್ಯ ಬಣದ ಸದಸ್ಯರು ಹೇಳುತ್ತಿದ್ದರೂ, ಸಂಸದ ಬಸವರಾಜ ಬೊಮ್ಮಾಯಿ ಮಾತ್ರ ಯಾವುದೇ ಪ್ರತಿಕ್ರಿಯೆ ಕೊಡುತ್ತಿಲ್ಲ.

ಹೀಗೆ ಬಿಜೆಪಿಯಲ್ಲಿ ಅಧಿಕಾರ ಇಲ್ಲದ ಸದಸ್ಯರ ಒಂದು ಬಣ ರಚನೆಯಾದರೆ, ಯತ್ನಾಳ ಮತ್ತು ವಿಜಯೇಂದ್ರ ಸಹವಾಸವೇ ಬೇಡ ಎನ್ನುವ ಮತ್ತೊಂದು ಬಣ ತಟಸ್ಥವಾಗಿ ಉಳಿದಿದೆ. ಸದ್ಯ ಶಾಸಕ, ಸಂಸದ ಸ್ಥಾನದಲ್ಲಿರುವ ಬಿಜೆಪಿ ಯಾವೊಬ್ಬ ನಾಯಕರೂ ಬಣ ರಾಜಕಾರಣದ ಬಗ್ಗೆ ಮಾತಾಡದೆ, ಮೌನವಾಗಿಯೆ ಮತ್ತೊಂದು ಬಣ ಸೃಷ್ಟಿಸಿಕೊಂಡಂತಾಗಿದೆ.

ಇನ್ನೊಂದೆಡೆ ಯತ್ನಾಳ ಬಣ ಯಾವುದೇ ಆರೋಪ-ಪ್ರತ್ಯಾರೋಪ, ಶಿಸ್ತು ಕ್ರಮಕ್ಕೆ ಅಂಜದೆ ವಕ್ಫ್ ವಿರುದ್ಧದ ಹೋರಾಟದಲ್ಲಿ ನಿರತವಾಗಿವೆ. ಬಿಜೆಪಿಯ ಬಣ ರಾಜಕಾರಣದ ಬೇಗುದಿ ಇಷ್ಟೊಂದು ವ್ಯಾಪಿಸಿದ್ದರೂ ಬಿಜೆಪಿ ಹೈಕಮಾಂಡ್ ಮೌನವಾಗಿರುವುದು ಶಿಸ್ತಿನ ಪಕ್ಷದಲ್ಲೂ ಅಶಿಸ್ತು ಮೂಡಲು ಕಾದು ಕುಳಿತಂತಿದೆ.

ದೇಸೀ ಕೃಷಿ ತರಬೇತಿ ಪಡೆದ ಶಿಬಿರಾರ್ಥಿಗಳಿಗೆ ಪ್ರಮಾಣಪತ್ರ ವಿತರಣೆ

ಸಾವಯವ ಕೃಷಿ ಪದ್ಧತಿಗೆ ಮಹತ್ವ ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಾವಿಂದು ಸಾವಯವ ಕೃಷಿ ಪದ್ಧತಿಗೆ ಮಹತ್ವ ನೀಡದಿದ್ದರೆ ಬರಲಿರುವ ದಿನಗಳಲ್ಲಿ ದೊಡ್ಡ ಸಮಸ್ಯೆ ಎದುರಿಸುವ ಸ್ಥಿತಿ ಬರಬಹುದು ಎಂದು ಧಾರವಾಡ ಕೃಷಿ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕ ಹಾಗೂ ಸಮೇತಿ (ಉತ್ತರ)ಯ ನಿರ್ದೇಶಕ ಡಾ. ಬಿ.ಡಿ. ಬಿರಾದಾರ ಹೇಳಿದರು.

ಅವರು ಗದುಗಿನ ಕೃಷಿ ಸಂಶೋಧನಾ ಕೇಂದ್ರದಲ್ಲಿ ಧಾರವಾಡ ಕೃಷಿ ವಿಶ್ವವಿದ್ಯಾಲಯ, ಹೈದ್ರಾಬಾದ್‌ನ ಮ್ಯಾನೇಜ್, ಸಮೇತಿ (ಉತ್ತರ) ಕೃಷಿ ಇಲಾಖೆಯ ಸಹಯೋಗದಲ್ಲಿ ಜರುಗಿದ ಕೃಷಿ ವಿಸ್ತರಣಾ ಸೇವೆಯಲ್ಲಿ ಡಿಪ್ಲೋಮಾ ಪೂರ್ಣಗೊಳಿಸಿದ ಶಿಬಿರಾರ್ಥಿಗಳಿಗೆ, ದೇಸೀ ತರಬೇತಿ (ಡಿಪ್ಲೋಮಾ) ಪೂರ್ಣಗೊಳಿಸಿದವರಿಗೆ ಪ್ರಮಾಣಪತ್ರ ವಿತರಿಸಿ ಮಾತನಾಡಿದರು.

ಅವೈಜ್ಞಾನಿಕ ಕೃಷಿ ಪದ್ಧತಿಯಿಂದಾಗಿ ಇಳುವರಿ ಇಳಿತ, ಭೂಮಿ ಫಲವತ್ತೆತೆಗೆ ಹಾನಿಯಾಗುವದು. ಆದ್ದರಿಂದ ಸಾವಯವ ಗೊಬ್ಬರವನ್ನು ಮೊದಲು ಬಳಕೆ ಮಾಡಿ ನಂತರ ಅಗತ್ಯತೆಯನ್ನು ಅವಲೋಕಿಸಿ ರಾಸಾಯನಿಕ ಗೊಬ್ಬರ ಬಳಕೆ ಮಾಡಬೇಕು. ಭೂಮಿ ತನ್ನ ಹದವನ್ನು ಕಳೆದುಕೊಳ್ಳದಂತೆ ಮುಂಜಾಗ್ರತೆ ವಹಿಸುವದು ಅಗತ್ಯ ಎಂದರು.

ಅಧಿಕ ಇಳುವರಿಗೆಗಾಗಿ ಸುಧಾರಿತ ಬೇಸಾಯ ಪದ್ಧತಿಯನ್ನು ಅಳವಡಿಸಿಕೊಳ್ಳುವ ಅಗತ್ಯವಿದೆ. ಸಂಶೋಧನೆಯ ಫಲದ

ಫಲಿತಾಂಶವನ್ನು ಕ್ರೋಢೀಕರಿಸಿರುವ ಸುಧಾರಿತ ಬೇಸಾಯಿ ಪದ್ಧತಿ ಅನುಸರಿಸಿ. ಹೊಸ ತಂತ್ರಜ್ಞಾನ, ಬೀಜೋಪಚಾರದಿಂದ ಅಧಿಕ ಇಳುವರಿ ಪಡೆಯಬಹುದು ಎಂಬುದನ್ನು ಇಲ್ಲಿ ತರಬೇತಿ ಹೊಂದಿದ ನೀವು ರೈತರಿಗೆ ಮನವರಿಕೆ ಮಾಡಬೇಕು ಎಂದರು.

ಈ ರೀತಿಯ ತರಬೇತಿಗಳು ಪರಿಣಾಮಕಾರಿ ಫಲಿತಾಂಶ ನೀಡುತ್ತಿವೆ. ರೈತರಿಗೆ ಕೃಷಿ ವಿಜ್ಞಾನದ ಮಾಹಿತಿ ತಲುಪುವದು ಅಗತ್ಯವಾಗಿದ್ದು, ರೈತರು, ಕೃಷಿ ಇಲಾಖೆ, ಕೃಷಿ ವಿ.ವಿ ನಡುವಿನ ಕೊಂಡಿಯಾಗಿರುವ ನಿಮ್ಮ ಮೇಲೆ ಹೆಚ್ಚಿನ ಜವಾಬ್ದಾರಿ ಇದೆ. ಕೃಷಿ ವಿಶ್ವವಿದ್ಯಾಲಯ ನಿಮ್ಮನ್ನು ಅವಲಂಬಿಸಿದೆ. ನಿಮ್ಮ ಮೂಲಕ ರೈತರ ಏಳ್ಗೆ ಆಗಬೇಕೆಂಬುದು ನಮ್ಮ ಸದಾಶಯವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಗದಗ ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕರಾದ ಜಿ.ಎಚ್. ತಾರಾಮಣಿ, ರೈತರೊಂದಿಗೆ ನೇರ ಸಂಪರ್ಕಕ್ಕೆ ಬರುವ ಕೃಷಿ ಪರಿಕರ ವಿತರಕರಾದ ನೀವು ಇಲ್ಲಿ ಪಡೆದುಕೊಂಡ ತರಬೇತಿಯನ್ನು ಸದುಪಯೋಗ ಮಾಡಿಕೊಳ್ಳಿ. ರೈತರಿಗೆ ಮಾರ್ಗದರ್ಶನ, ಜಾಗೃತಿ ಮಾಡಿ ರೈತರನ್ನು ಆರ್ಥಿಕವಾಗಿ ಸಬಲರನ್ನಾಗಿಸಿ, ನೀವೂ ಮುನ್ನಡೆ ಸಾಧಿಸಿ. ಆದರೆ ಕೃಷಿ ಪರಿಕರ, ರಾಸಾಯನಿಕ ಮಾರಾಟ ಹೆಚ್ಚಿಸಿ ಲಾಭ ಪಡೆಯಲು ರೈತರಿಗೆ ಮೋಸ ಮಾಡಬೇಡಿ. ಸತ್ಯ, ನಿಷ್ಠೆ, ಪ್ರಾಮಾಣಿಕತೆಯಿಂದ ಕಾರ್ಯ ನಿರ್ವಹಿಸಿ ಎಂದರು.

> ಧಾರವಾಡ ಕೃಷಿ ವಿಶ್ವವಿದ್ಯಾಲಯದ ಪ್ರಾಧ್ಯಾಪಕ, ರಾಜ್ಯ ನೋಡಲ್ ಅಧಿಕಾರಿ (ದೇಸಿ) ಹಾಗೂ ಸಮೇತಿ ಸಂಯೋಜಕ ಡಾ. ಎಸ್.ಎನ್. ಜಾಧವ ಮಾತನಾಡಿ, ವಿಜ್ಞಾನ ಮತ್ತು ತಂತ್ರಜ್ಞಾನ ಎಷ್ಟೇ ಅಭಿವೃದ್ಧಿ ಹೊಂದಿದ್ದರೂ ಉದ್ಯೋಗ ಅವಕಾಶಗಳು ಎಷ್ಟೇ ಸೃಷ್ಟಿಯಾಗಿದ್ದರೂ ಇವುಗಳು ಎಂದಾದರೂ ಕೈಕೊಡಬಹುದು. ಆದರೆ ಭೂಮಿ ತಾಯಿ ಹಾಗಲ್ಲ, ನಂಬಿದವರಿಗೆ ಅನ್ನದಾತೆ-ಜೀವದಾತೆ. ಕೃಷಿಯಲ್ಲಿ ವಿಫುಲವಾದ ಉದ್ಯೋಗ ಅವಕಾಶಗಳಿದ್ದು, ಸಾಧನೆ ಮಾಡಬೇಕೆನ್ನುವವರಿಗೆ ಅವಕಾಶಗಳು ಹೆಚ್ಚಾಗಿವೆ ಎಂದರು.

ತರಬೇತಿ ಪಡೆದ ಕೃಷಿ ಪರಿಕರ ವಿತರಕರಿಗೆ ಪ್ರಮಾಣಪತ್ರ ನೀಡಿ ರೈತರ ಏಳ್ಗೆಗಾಗಿ ಶ್ರಮಿಸುವ ಪ್ರಮಾಣ ವಚನ ಬೋಧಿಸಲಾಯಿತು. ತರಬೇತಿ ಪಡೆದುಕೊಂಡವರು ತಮ್ಮ ಅಭಿಪ್ರಾಯ ಹೇಳಿದರು. ಕೃಷಿ ವಿಜ್ಞಾನಿ ಎಸ್.ಎ. ಸೂಡಿಶೆಟ್ಟರ ಸ್ವಾಗತಿಸಿ ನಿರೂಪಿಸಿದರು. ಬೆಳವಟಗಿಯ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದ ಕೃಷಿ ವಿಸ್ತರಣಾ ಮುಂದಾಳು ಡಾ. ಸಿ.ಎಂ. ರಫಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಗದಗ ಕೃಷಿ ವಿಸ್ತರಣಾ ಕೇಂದ್ರದ ಮುಖ್ಯಸ್ಥ ಡಾ. ಎಸ್.ಎಲ್. ಪಾಟೀಲ ಉಪಸ್ಥಿತರಿದ್ದರು. ಕೃಷಿ ವಿಜ್ಞಾನಿ ಎಸ್.ಕೆ. ಮುದ್ದಾಪೂರ ವಂದಿಸಿದರು.

ಶರಣ ಸಂಗಮ ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಡಿ.1ರಂದು ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1622ನೇ ಶರಣ ಸಂಗಮದಲ್ಲಿ ಬಸವಾದಿ ಶಿವಶರಣೆಯರ ವಚನಗಳ ಚಿಂತನೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣೆ ಸಹನಾ ಅ. ಆಲತಗಿ ಇವರು ವಚನ ಚಿಂತನೆ ಮಾಡುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಿಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

ಯತ್ನಾಳರು ತಮ್ಮ ತಿಳಿಗೇಡಿತನ ಬಿಡಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಬೀದರನಲ್ಲಿ ವಕ್ಫ್ ವಿರೋಧಿಸಿ ನಡೆದ ಕಾರ್ಯಕ್ರಮದಲ್ಲಿ ಶಾಸಕ ಬಸನಗೌಡ ಪಾಟೀಲರ ಬಾಯಿಂದ ಲಿಂಗಾಯತ ಧರ್ಮಗುರು ಬಸವಣ್ಣನವರ ಬಗ್ಗೆ ಅವಹೇಳನದ ಮಾತುಗಳನ್ನಾಡಿರುವುದನ್ನು ಗದುಗಿನದ ಬಸವಪರ ಸಂಘಟನೆಗಳು ತೀವ್ರವಾಗಿ ಖಂಡಿಸಿವೆ.

ನಮ್ಮ ನಾಡಿನ ದುರಂತವೆಂದರೆ ಮೊಟ್ಟ ಮೊದಲ ಪಾರ್ಲಿಮೆಂಟ್ ಅನುಭವ ಮಂಟಪದ ರೂವಾರಿ ಬಸವಣ್ಣನವರ ಬಗ್ಗೆ ಅದೇ ನಾಡಿನಲ್ಲಿ ಜನಿಸಿದ ಅದೂ ಲಿಂಗಾಯತ ಧರ್ಮೀಯ ಬಸನಗೌಡ ಯತ್ನಾಳರಿಗೆ ಅಧ್ಯಯನದ ಕೊರತೆಯಿದೆ ಎಂದು ಬಸವಪರ ಸಂಘಟನೆಗಳು ಹೇಳಿವೆ. ಬಸನಗೌಡ ಯತ್ನಾಳರು ತಮ್ಮ ತಿಳಿಗೇಡಿತನ ಬಿಡಬೇಕು. ನಮ್ಮ ಧರ್ಮಗುರುಗಳ ಬಗ್ಗೆ ತೀರಾ ಕೀಳಾಗಿ ಮಾತನಾಡಿದ ಬಿಜೆಪಿ ಶಾಸಕ ಬಸನಗೌಡ ಪಾಟೀಲ ಯತ್ನಾಳರು ಸಮಾಜದ ಕ್ಷಮೆ ಕೇಳಬೇಕೆಂದು ಬಸವದಳವೂ ಸ್ಥೆರಿದಂತೆ ವಿವಿಧ ಸಂಘಟನೆಗಳು ಒತ್ತಾಯಿಸಿವೆ.ಒತ್ತಾಯಿಸಿದ್ದಾರೆ.

ಮನುಕುಲ ಸದ್ಭಾವನಾ ಧರ್ಮ ಸಮಾರಂಭದಲ್ಲಿ ರಂಭಾಪುರಿ ಶ್ರೀಗಳು

ಭರವಸೆ ಮನುಷ್ಯನನ್ನು ಬದುಕಿಸುತ್ತದೆ

■ ವಿಜಯಸಾಕ್ಷಿ ಸುದ್ದಿ, ರಾಣೆಬೆನ್ನೂರು

ಮನುಷ್ಯ ಯಾವಾಗಲೂ ಸುಖಾಪೇಕ್ಷಿ. ಸುಖದ ಮೂಲ ಧರ್ಮ ಪರಿಪಾಲನೆಯಲ್ಲಿದೆ. ಭರವಸೆ ಮನುಷ್ಯನನ್ನು ಬೆಳೆಸಿ ಬದುಕಿಸುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ನಗರದ ಹಿರೇಮಠದಲ್ಲಿ ಜರುಗಿದ ಮನುಕುಲ ಸದ್ಭಾವನಾ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸುಂದರವಾಗಿ ಅಲಂಕಾರ ಮಾಡಿದ ಸುಳ್ಳಿಗಿಂತ ಹರಿದ ಬಟ್ಟೆಯ ಸತ್ಯವೇ ಹೆಚ್ಚು ಶಕ್ತಿಶಾಲಿ. ಕೈಗೆತ್ತಿಕೊಂಡ ಕೆಲಸವನ್ನು ಪೂರ್ಣ ಮನಸ್ಸಿನಿಂದ ನೆರವೇರಿಸುವುದು ಮುಖ್ಯ. ಬದುಕೆಂಬುದು ಕಷ್ಟ-ಸುಖ, ನೋವು-ನಲಿವುಗಳ ಸಂಮಿಶ್ರಣ. ನಮ್ಮ ಜೀವನದ ದೋಣಿಗೆ ನಾವೇ ನಾಯಕರು. ಮನುಷ್ಯ ಬದುಕಿರುವಾಗಲೇ ಸಾಯುವ ಹಾಗೆ ಮಾಡುವ ಎರಡು ಬಲವಾದ ಕಾರಣಗಳಿವೆ. ಒಂದು ಅವಮಾನವಾದರೆ ಇನ್ನೊಂದು ಅನುಮಾನ. ಸಂಪತ್ತು ಹೆಚ್ಚಿದಂತೆ ಸೌಜನ್ಯ ಗುಣ ಬೆಳೆಯಬೇಕು. ಸಜ್ಜನ ಸತ್ಪುರುಷರ ಸಂಗದಿಂದ ಬೆಳೆದು ಬಂದಾಗ

ಬದುಕು ಉಜ್ವಲಗೊಳ್ಳುವುದೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಮಹಾಮುನಿ ಅಗಸ್ತ್ಯರಿಗೆ ಬೋಧ ಮಾಡುವಾಗ ಸಿದ್ಧಾಂತ ಶಿಖಾಮಣಿ ಧರ್ಮ ಗ್ರಂಥದಲ್ಲಿ ನಿರೂಪಿಸಿದ್ದಾರೆ. ಹಿರೇಮಠದ ಶಿವಯೋಗಿ ಶಿವಾಚಾರ್ಯರು ಶನಿ ಕ್ಷೇತ್ರದಲ್ಲಿ ಭಕ್ತರ ಕಲ್ಯಾಣಕ್ಕಾಗಿ ಸದ್ಭಾವನಾ ಧರ್ಮ ಸಮಾರಂಭ ಸಂಯೋಜಿಸಿ ಮಾರ್ಗದರ್ಶನ ಸಂಸ್ಕಾರ ನೀಡುತ್ತಿರುವುದು ಸಂತೋಷ ತಂದಿದೆ ಎಂದರು.

'ಮನುಕುಲ ಸದ್ಭಾವನಾ ರಾಷ್ಟ್ರೀಯ ಪ್ರಶಸ್ತಿ' 2023ಕ್ಕೆ ದಾವಣಗೆರೆ ಉದ್ಯಮಿ ಪಿ. ಶಿವಕುಮಾರ ಹಾಗೂ 2024ನೇ ಸಾಲಿನ ಪ್ರಶಸ್ತಿಗೆ ಪಾತ್ರರಾದ ಖ್ಯಾತ ಚಲನಚಿತ್ರ ನಟ ದೊಡ್ಡಣ್ಣನವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಪ್ರಶಸ್ತಿ ಪ್ರದಾನ ಮಾಡಿ ಶುಭ ಹಾರೈಸಿದರು.

ಹಿರೇಮಠದ ಶಿವಯೋಗಿ ಶಿವಾಚಾರ್ಯರು ಮಾತನಾಡಿ, ಭಾರತೀಯ ಉತ್ಕೃಷ್ಟ ಸಂಸ್ಕೃತಿಯನ್ನು ಬೆಳೆಸುವುದೇ ನಮ್ಮ ಗುರಿಯಾಗಿದೆ. ಈ ನಾಡಿದ ಧರ್ಮ ಬಂಧುಗಳ ಸಹಕಾರದಿಂದ ಬಹಳ ಉತ್ತಮ ರೀತಿಯಲ್ಲಿ ಕಾರ್ಯಕ್ರಮ ನಡೆದುಕೊಂಡು ಬಂದಿದೆ ಎಂದರು.

ಸಮಾರಂಭದ ನಂತರ ಶನೇಶ್ವರ ಹಿರೇಮಠದಿಂದ ಕಾರ್ತೀಕ ದೀಪೋತ್ಸವ ಸಂಭ್ರಮದಿಂದ ಜರುಗಿತು. ಸಹಸ್ರಾರು ಭಕ್ತರು ಪಾಲ್ಗೊಂಡು ಧನ್ಯರಾದರು.

> ಸಮಾರಂಭ ಉದ್ಘಾಟಿಸಿದ ಬೆಳಗಾವಿ ಸಂಸದ ಜಗದೀಶ ಶೆಟ್ಟರ್ ಮಾತನಾಡಿ, ಇಂದಿನ ವಿಜ್ಞಾನ-ತಂತ್ರಜ್ಞಾನ ಪ್ರಪಂಚದಲ್ಲಿ ಮನುಷ್ಯ ಶಾಂತಿ, ನೆಮ್ಮದಿಯಿಂದ ಬದುಕುವುದು ಕಷ್ಟವಾಗುತ್ತಿದೆ. ಜನರು ಹಣದ ಬೆನ್ನು ಹತ್ತಿ ಸಂಸ್ಕೃತಿ ಮರೆಯುತ್ತಿದ್ದಾರೆ. ಆದರ್ಶಗಳನ್ನು ಮರೆತರೆ ಬದುಕಿಗೆ ಭವಿಷ್ಯವಿಲ್ಲ. ಇಂಥ ಸಮಾರಂಭಗಳು ಜನ ಸಮುದಾಯದಲ್ಲಿ ಶಾಂತಿ ಸಂತೃಪ್ತಿ, ನೆಮ್ಮದಿ ಉಂಟು ಮಾಡುತ್ತವೆ ಎಂದರು.

'ಅಗಡಿ ಕನ್ನಡ ಹಬ್ಬ'ದಲ್ಲಿ ಕನ್ನಡಾಭಿಮಾನದ ಅನಾವರಣ

ಮನರಂಜಿಸಿದ ಮೆರವಣಿಗೆ, ಸಾಂಸ್ಕೃತಿಕ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇಲ್ಲಿನ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಮ್. ಅಗಡಿ ಅಭಿಯಾಂತ್ರಿಕ ಮತ್ತು ತಾಂತ್ರಿಕ ಮಹಾವಿದ್ಯಾಲಯದಲ್ಲಿ ಅಗಡಿ ಕನ್ನಡ ಸಂಘದ 10ರ ಸಂಭ್ರಮದ ಅಂಗವಾಗಿ ಜರುಗಿದ 'ಅಗಡಿ ಕನ್ನಡ ಹಬ್ಬ'ದಲ್ಲಿ ತಾಯಿ ಭುವನೇಶ್ವರಿ ದೇವಿಯ ಮೆರವಣಿಗೆ ವಿದ್ಯಾರ್ಥಿಗಳಲ್ಲಿನ ಕನ್ನಡ ನಾಡು-ನುಡಿ-ಸಂಸ್ಕೃತಿ ಮೇಲಿನ ಅಭಿಮಾನ ಮತ್ತು ಪ್ರೀತಿಯನ್ನು ಅಭಿವ್ಯಕ್ತಗೊಳಿಸಿತು.

ಡೊಳ್ಳು ಕುಣಿತ, ತಾಯಿ ಭುವನೇಶ್ವರಿ, ಕಿತ್ತೂರ ರಾಣಿ ಚನ್ನಮ್ಮ, ಕ್ರಾಂತಿವೀರ ಸಂಗೊಳ್ಳಿ

ರಾಯಣ್ಣ, ಜಗಜ್ಯೋತಿ ಬಸವೇಶ್ವರರ ವೇಷಭೂಷಣ ಧರಿಸಿದ್ದ ವಿದ್ಯಾರ್ಥಿಗಳು ಡೊಳ್ಳು ಕುಣಿತಕ್ಕೆ ಸೊಗಸಾಗಿ ನೃತ್ಯ ಮಾಡಿ ಸಂತಸಪಟ್ಟರು.

ಸಂಜೆ ಸಾಂಸ್ಕೃತಿಕ ಕಾರ್ಯಕ್ರಮವು ಮಹಾವಿದ್ಯಾಲಯದ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಜೊತೆಗೂಡಿ ಕವಿ ಕೆ.ಎಸ್. ನಿಸಾರ್ ಅಹಮ್ಮದ ರಚಿಸಿದ ಜೋಗದ ಸಿರಿ ಬೆಳಕಿನಲ್ಲಿ, ತಾಯಿ ನಿತ್ಯೋತ್ಸವ ಹಾಡಿನೊಂದಿಗೆ ಪ್ರಾರಂಭಗೊಂಡಿತು. ವಿದ್ಯಾರ್ಥಿಗಳು ಪ್ರದರ್ಶಿಸಿದ ಜಾನಪದ ಹಾಡುಗಳು, ಯಕ್ಷಗಾನ, ಕೋಲಾಟ, ಕಂಸಾಳೆ ನೃತ್ಯ, ಭರತನಾಟ್ಯ, ಭಸ್ಮಾಸುರ ವಧೆ, ನಾಗವಲ್ಲಿ, ದಿಂಡಿ ನೃತ್ಯಗಳು ಎಲ್ಲರ ಗಮನ ಸೆಳೆದವು.

ಈ ಸಂದರ್ಭದಲ್ಲಿ ಪ್ರಾಚಾರ್ಯ ಡಾ. ಪರಶುರಾಮ ಬಾರಕಿ, ಡಾ. ಹಯವದನ, ಡಾ. ರಾಜಶೇಖರ್ ಮೂಲಿಮನಿ, ಡಾ. ಸುಜಾತಾ ಸಂಗೂರ, ಡಾ. ಸುಭಾಷ್ ಮೇಟಿ, ಡಾ. ವಿಕ್ರಮ ಶಿರೋಳ್, ಪ್ರೊ. ಆರ್.ಎಂ. ಪಾಟೀಲ, ಪ್ರೊ. ಸೋಮಶೇಖರ್ ಕೆರಿಮನಿ, ಪ್ರೊ. ಪ್ರತಿಮಾ ಮಹಾಪುರುಷ, ಪ್ರೊ. ಶಂಭುಲಿಂಗಪ್ಪ, ಪ್ರೊ. ಶಂಭುಲಿಂಗಪ್ಪ, ಷಣ್ಮುಖ ಜಿ, ಶ್ರೀದೇವಿ ಹೆಚ್, ಡಾ. ಗಿರೀಶ ಯತ್ತಿನಹಳ್ಳಿ, ರವಿ ಪ್ರಕಾಶ್ ಸೇರಿದಂತೆ ಮಹಾವಿದ್ಯಾಲಯದ ಸಿಬ್ಬಂದಿ ವರ್ಗದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ನಿಹಾರಿಕಾ ರಾಣಿ, ನಂದೀಶ್, ಉಷಾ ದೇವರಮನಿ, ಚೇತನ್, ಪಟ್ಟೆದ ಕಾರ್ಯಕ್ರಮ ನಿರ್ವಹಿಸಿದರು.

ಜಾತವೇದಮುನಿ ಶಿವಾಚಾರ್ಯರ ಅಗಲಿಕೆಗೆ ರಂಭಾಪುರಿ ಶ್ರೀಗಳ ಸಂತಾಪ

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಬಾಗಲಕೋಟೆ ಜಿಲ್ಲೆ ಕೂಡಲಸಂಗಮ ಕ್ಷೇತ್ರದ ಸಾರಂಗಮಠದ ಶ್ರೀ ಜಾತವೇದಮುನಿ ಶಿವಾಚಾರ್ಯ ಸ್ವಾಮಿಗಳು ಅನಾರೋಗ್ಯದಿಂದಾಗಿ ಶನಿವಾರ ಶಿವೈಕ್ಯರಾಗಿರುವುದಕ್ಕೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಸಂತಾಪ ವ್ಯಕ್ತಪಡಿಸಿದ್ದಾರೆ.

ಕೂಡಲಸಂಗಮ ಕ್ಷೇತ್ರದಲ್ಲಿ ಉಜ್ಜಯಿನಿ ಪೀಠದ ಶಾಖಾ ಮಠವಾಗಿರುವ ಸಾರಂಗಮಠದ ಜಾತವೇದಮುನಿ ಶಿವಾಚಾರ್ಯರು ಚಿಕ್ಕ ವಯಸ್ಸಿನಲ್ಲಿ ಮಠದ ಜವಾಬ್ದಾರಿಯನ್ನು ಹೊತ್ತು ಮಠದ ಅಭಿವೃದ್ಧಿ ಮತ್ತು ಭಕ್ತ ಸಂಕುಲಕ್ಕೆ ಮಾರ್ಗದರ್ಶನ ನೀಡಿದ ನೆನಪು ಮರೆಯಲಾಗದು. ಸಾರಂಗಮಠವು ಸಮಾಜಕ್ಕೆ ಅಮೂಲ್ಯ ಮಾರ್ಗದರ್ಶನ ಕೊಟ್ಟ ಶ್ರೀ ಮಠವಾಗಿದೆ. ಈ ಪವಿತ್ರ ಪರಂಪರೆಯನ್ನು ಲಿಂಗೈಕ್ಯರಾದ ಜಾತವೇದಮುನಿ ಶಿವಾಚಾರ್ಯರಿಗೆ ಶ್ರೀ ಜಗದ್ಗುರು ಪಂಚಾಚಾರ್ಯರು ಕೂಡಲಸಂಗಮಕ್ಕೆ ಆಗಮಿಸಿದಾಗ ಶ್ರೀ ಗುರು ಪಟ್ಟಾಧಿಕಾರ ಮಾಡಿ ಆಶೀರ್ವದಿಸಲಾಗಿತ್ತು. ಸದಾ ಕ್ರಿಯಾಶೀಲರಾದ ಶ್ರೀಗಳವರು ಇತ್ತೀಚೆಗೆ ಅನಾರೋಗ್ಯಕ್ಕೆ ತುತ್ತಾಗಿ ಇಂದು ಲಿಂಗೈಕ್ಯರಾಗಿರುವುದು ಭಕ್ತ ಸಮುದಾಯಕ್ಕೆ ಅತ್ಯಂತ ದುಃಖವನ್ನು ಉಂಟುಮಾಡಿದೆ. ಅವರ ಅಗಲಿಕೆಯಿಂದ ಉಂಟಾದ ಸ್ಥಾನವನ್ನು ಪುತ್ರವರ್ಗ ಪರಂಪರೆಯಂತೆ ಅವರ ವಂಶದಲ್ಲಿ ಯಾರಾದರೊಬ್ಬ ಸಮರ್ಥ ಉತ್ತರಾಧಿಕಾರಿಯನ್ನು ಆಯ್ಕೆ ಮಾಡುವುದು ಅತ್ಯಂತ ಸೂಕ್ತ. ಶ್ರೀಗಳವರ ಪವಿತ್ರ ಆತ್ಮಕ್ಕೆ ಶ್ರೀ ಜಗದ್ಗುರು ರೇಣುಕಾದಿ ಪಂಚಾಚಾರ್ಯರು ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಚಿರಶಾಂತಿಯಿತ್ತು ಮಠದ ವಂಶಸ್ಥರಿಗೆ ಹಾಗೂ ಭಕ್ತ ಸಂಕುಲಕ್ಕೆ ದುಃಖವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ಭಗವಂತ ಅನುಗ್ರಹಿಸಲೆಂದು ಶ್ರೀ ರಂಭಾಪುರಿ ಜಗದ್ಗುರುಗಳು ತಮ್ಮ ಸಂತಾಪ ಸೂಚಕ ಸಂದೇಶದಲ್ಲಿ ತಿಳಿಸಿದ್ದಾರೆ.

ದಾನಮ್ಮದೇವಿಯ ಪುರಾಣದಲ್ಲಿ ಮದುವೆ ಸನ್ನಿವೇಶ ವಿಶ್ಲೇಷಣೆ

ಸಾಮೂಹಿಕ ವಿವಾಹಕ್ಕೆ ಒತ್ತು ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಆಧುನಿಕತೆಯ ಇಂದಿನ ದಿನಗಳಲ್ಲಿ ಮದುವೆಗಳು ವೈಭವೀಕರಣ, ದುಂದುವೆಚ್ಚ, ಪ್ರತಿಷ್ಠೆಯ ಮದುವೆಗಳಾಗಿ ಪರಿವರ್ತನೆಗೊಳ್ಳುತ್ತಿವೆ. ಕಾರಣ ನಾವಿಂದು ಸಾಮೂಹಿಕ ವಿವಾಹಕ್ಕೆ ಹೆಚ್ಚಿನ ಒತ್ತು ನೀಡಬೇಕಿದೆ. ದುಂದುವೆಚ್ಚಕ್ಕೆ ಕಡಿವಾಣ ಹಾಕಿ ಸರಳ ವಿವಾಹವನ್ನು ಪ್ರೋತ್ಸಾಹಿಸುವದು ಅವಶ್ಯವಿದೆ ಎಂದು ಪುರಾಣ ಪ್ರವಚನಕಾರ ಬೆಳ್ಳಟ್ಟಿಯ ಫಕ್ಕೀರೇಶ್ವರ ಶಾಸ್ತ್ರೀಗಳು ಹಿರೇಮಠ ಹೇಳಿದರು.

ಅವರು ಗದುಗಿನ ಬಸವೇಶ್ವರ ನಗರದ ವೀರಭದ್ರೇಶ್ವರ ಕಲ್ಯಾಣ ಮಂಟಪದಲ್ಲಿ ಶ್ರೀ ವೀರಭದ್ರ ದೇವಸ್ಥಾನ ಟ್ರಸ್ಟ್ ಕಮಿಟಿ, ಶ್ರೀ ಶಂಕರಲಿಂಗ ದೇವಸ್ಥಾನ ಟ್ರಸ್ಟ್ ಕಮಿಟಿ ಹಾಗೂ ದಾನೇಶ್ವರಿ ಮಹಿಳಾ ಮಂಡಳ, ಯುವಕ ಮಂಡಳದ ಸಂಯುಕ್ತ ಆಶ್ರಯದಲ್ಲಿ ಜರುಗುತ್ತಿರುವ ಶ್ರೀ ಶರಣೆ ದಾನಮ್ಮದೇವಿಯ 18ನೇ ವರ್ಷದ ಪುರಾಣ ಪ್ರವಚನ ಮಾಲಿಕೆಯಲ್ಲಿ ದಾನಮ್ಮದೇವಿ-ಸೋಮಲಿಂಗ ಅವರ ವಿವಾಹ ಸನ್ನಿವೇಶವನ್ನು ವಿಶ್ಲೇಷಿಸಿ ಮಾತನಾಡಿದರು.

ದಾನಮ್ಮದೇವಿಯ ವಿವಾಹವನ್ನು ಶಿವಭಕ್ತನಾದ ಶರಣ ಸೋಮಲಿಂಗೇಶ್ವರನೊಂದಿಗೆ ಮಾಡಲು ಗುರು-ಹಿರಿಯರು ನಿಶ್ಚಯಿಸುತ್ತಾರೆ. ಆಗ ಬಡಜನರ ಮದುವೆಯ ಕಷ್ಟಗಳನ್ನು ಅರಿತಿದ್ದ ದಾನಮ್ಮ ತನ್ನಿಂದ ಬಡವರಿಗೆ ಸಹಾಯ ಆಗಲೆಂದು ನಿರ್ಧರಿಸಿ ನನ್ನೊಂದಿಗೆ 551 ಬಡ ಹೆಣ್ಣು ಮಕ್ಕಳ ಸಾಮೂಹಿಕ ವಿವಾಹ

ನೆರವೇರಿಸಬೇಕೆಂದು ಕರಾರನ್ನು ತಂದೆಗೆ ಹಾಕುತ್ತಾಳೆ. ತಂದೆ ದಾನಮ್ಮಳ ಸಾಮಾಜಿಕ ಕಳಕಳಿ ಅರಿತು ಸಾಮೂಹಿಕ ವಿವಾಹ ಜರುಗಿಸಲು ಒಪ್ಪಿ ದಾನಮ್ಮ ತಾಯಿ ಸಾಮಾಜಿಕ ಕಳಕಳಿಯನ್ನು ಶ್ಲಾಘಿಸುವರು ಎಂದರು. ಮೊಟ್ಟ ಮೊದಲ ಬಾರಿಗೆ ಕನ್ನಡ ನಾಡಿನಲ್ಲಿ ಸಾಮೂಹಿಕ ವಿವಾಹದ ಪರಿಕಲ್ಪನೆ ನೀಡಿದವರಲ್ಲಿ ದಾನಮ್ಮದೇವಿ ಮುಂಚೂಣಿಯಲ್ಲಿದ್ದಾಳೆ ಎಂದು ವಿವರಿಸಿದ ಶಾಸ್ತ್ರೀಗಳ ಪ್ರವಚನಕ್ಕೆ ಹಿರಿಯ ಸಂಗೀತ ಕಲಾವಿದ ವೀರೇಶ ಕಿತ್ತೂರ ಸಂಗೀತ ನೀಡಿದರು. ಶಾಮರಾವ ಪುಲಾರೆ ತಬಲಾ ಸಾಥ್ ನೀಡಿದರು.

ಪ್ರವಚನಕ್ಕೂ ಮುನ್ನ ಪುರಾಣದಲ್ಲಿ ಪ್ರಸ್ತಾಪಿತ ದಾನಮ್ಮ-ಸೋಮಲಿಂಗ ವಿವಾಹವು ವೀರಭದ್ರೇಶ್ವರ ದೇವಸ್ಥಾನದ ಪ್ರಾಂಗಣದಲ್ಲಿ ಗುರುಹಿರಿಯರ ಸಮ್ಮುಖದಲ್ಲಿ ಪಂಚಕಳಸದೊಂದಿಗೆ ಅರ್ಚಕ ಗಂಗಾಧರ ಹಿರೇಮಠ, ವೀರೇಶ ಗಣಾಚಾರಿ ಅವರ ಪೌರೋಹಿತ್ಯದಲ್ಲಿ ಜರುಗಿತು. ಶರಣ-ಶರಣೆ ಭಕ್ತಾಧಿಗಳೊಂದಿಗೆ ವಿವಾಹ ಸನ್ನಿವೇಶವನ್ನು ವಾದ್ಯವೈಭವ, ಜಯಘೋಷಗಳೊಂದಿಗೆ ಯಶಸ್ವಿಗೊಳಿಸಿದರು. ದಾನೇಶ್ವರಿ ಮಹಿಳಾ ಮಂಡಳ, ವೀರಭದ್ರ ದೇವಸ್ಥಾನ ಟ್ರಸ್ಟ್ ಕಮಿಟಿ, ಶಂಕರಲಿಂಗ ದೇವಸ್ಥಾನ ಟ್ರಸ್ಟ್ ಕಮಿಟಿಯ ಪದಾಧಿಕಾರಿಗಳು, ಟ್ರಸ್ಟಿಗಳಿದ್ದರು.

ಅಧ್ಯಕ್ಷತೆಯನ್ನು ಶೋಭಾ ಗುಗ್ಗರಿ ವಹಿಸಿದ್ದರು.

ಇಂದು ಕುಂಭಮೇಳ

ಡಿ. 1ರಂದು ಮುಂಜಾನೆ 8 ಗಂಟೆಗೆ ಗದಗ ಬಸವೇಶ್ವರ ನಗರದಲ್ಲಿ ದಾನಮ್ಮದೇವಿಯ ಪಲ್ಲಕ್ಕಿ ಉತ್ಸವ, ಕುಂಭಮೇಳ ಜರುಗುವದು. ಮುಂಜಾನೆ 11 ಗಂಟೆಗೆ ಪುರಾಣ ಮಂಗಲೋತ್ಸವ ಜರುಗುವದು. ಸಾನ್ನಿಧ್ಯವನ್ನು ಜ. ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸುವರು. ಅಧ್ಯಕ್ಷತೆಯನ್ನು ಲಲಿತಾ ತಡಸದ ವಹಿಸುವರು. ಇದೇ ಸಂದರ್ಭದಲ್ಲಿ ಶಿಲ್ಪಕಲಾವಿದ ರಾಘವೇಂದ್ರಾಚಾರ್ಯ ಶಿಲ್ಪಿ ಹಾಗೂ ಮಹಾರುದ್ರಪ್ಪ ಸಣ್ಣವೀರಪ್ಪ ಅವರಿಗೆ ಸನ್ಮಾನವಿದೆ ಎಂದು ಪ್ರಕಟಣೆ ತಿಳಿಸಿದೆ.

ಅತಿಥಿಗಳಾಗಿ ಶಿವಲೀಲಾ ತಡಸದ, ಶಾರದಾ ಸಂಬರಗಿ, ಲಕ್ಷ್ಮೀ ಗುರಿಕಾರ, ಸುಧಾ ಕೆರೂರ, ಮಂಜುಳಾ ಡಂಬಳ, ರೂಪಾ ಯಂಡಿಗೇರಿ ಆಗಮಿಸಿದ್ದರು. ಸುರೇಖಾ ಪಿಳ್ಳೆ ನಿರೂಪಿಸಿದರು ಕೊನೆಗೆ ವಿಜಯಲಕ್ಷ್ಮೀ ಕುಬಸದ ವಂದಿಸಿದರು. ಭಕ್ತಿ ಸೇವೆ ವಹಿಸಿಕೊಂಡಿದ್ದ ಸೇವಾಕರ್ತರನ್ನು ಸನ್ಮಾನಿಸಿ ಗೌರವಿಸಲಾಯಿತು. ಲಲಿತಾ ತಡಸದ, ಶೈಲಜಾ ಕೊಡೇಕಲ್, ವಿಜಯಲಕ್ಷ್ಮೀ ಕಾತರಕಿ, ಸಾವಿತ್ರಿ ಬೇವಿನಮರದ, ಪುಷ್ಪಾವತಿ ಬಳ್ಳಾರಿ, ವಿಜಯಲಕ್ಷ್ಮೀ ಬೆಂಗಳೂರು ಮುಂತಾದವರು ಮುಂದಾಳತ್ವ ವಹಿಸಿದ್ದರು.

ಗವಿಶಿದ್ಧಯ್ಯರಿಗೆ ರಾಜ್ಯ ಪ್ರಶಸ್ತಿ ಪ್ರದಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ ಸಾಧಕರಿಗೆ ಕೊಡಮಾಡುವ 2024ನೇ ಸಾಲಿನ ವ್ಯಕ್ತಿ ವಿಭಾಗದ ರಾಜ್ಯ ಪ್ರಶಸ್ತಿಯನ್ನು ಬೆಂಗಳೂರಿನ ಜವಾಹಾರ ಬಾಲ ಭವನದಲ್ಲಿ ಜರುಗಿದ ಮಕ್ಕಳ ದಿನಾಚರಣೆಯ ಸಮಾರಂಭದಲ್ಲಿ ಜನಪದ ಕೂಗು ಕಾರ್ಯಕ್ರಮದ ಮೂಲಕ ಮಕ್ಕಳಿಗೆ ಮೌಲ್ಯಾತ್ಮಕ ಜೀವನ ಕೌಶಲ್ಯ ತರಬೇತಿ ನೀಡುತ್ತಿರುವ ಖ್ಯಾತ ಜನಪದ ಕಲಾವಿದ ಜಂತಲಿ ಶಿರೂರು ಗ್ರಾಮದ ಗವಿಶಿದ್ಧಯ್ಯ ಹಳ್ಳಿಕೇರಿಮಠ ಅವರಿಗೆ ಪ್ರದಾನ ಮಾಡಲಾಯಿತು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರಾದ ಲಕ್ಷ್ಮೀ ಆರ್.ಹೆಬ್ಬಾಕರ್ ಅವರು ಪ್ರಶಸ್ತಿ ಫಲಕ ನೀಡಿ ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಶಾಸಕರು, ನಿಗಮ ಮಂಡಳಿಗಳ ಅಧ್ಯಕ್ಷರು, ಅಧಿಕಾರಿಗಳು ಉಪಸ್ಥಿತರಿದ್ದರು.

ಗಮನ ಸೆಳೆದ ಭಜನಾ ಹಾಡುಗಳು

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಶಂಕರ ದೇವಸ್ಥಾನದಲ್ಲಿ ನಡೆಯುತ್ತಿರುವ ಯೋಗಿರಾಜ ಮಹಾರಾಜರ ಆರಾಧನಾ ಮಹೋತ್ಸವದಂಗವಾಗಿ ಮಹಿಳೆಯರು ಹಾಡಿದ ಭಜನಾ ಹಾಡುಗಳು ಗಮನ ಸೆಳೆದವು.

ಗದಗ ಕರಿ ಭಜನಾ ಮಂಡಳ ಕರಿಯಮ್ಮನ ಕಲ್ಲು ಬಡಾವಣೆ, ಹುಬ್ಬಳ್ಳಿಯ ಶಾರದಾ ಮಹಿಳಾ ಕುಂಜ ಶಂಕರಮಠ, ಹಳೆ ಹುಬ್ಬಳ್ಳಿಯ ಭವಾನಿ ಶಂಕರ ಭಜನಾ ಮಂಡಳ ಹಾಗೂ ವಿಭಾವರಿ ಭಜನಾ ಮಂಡಳ, ಗಣೇಶ ಪೇಟೆ ಹುಬ್ಬಳ್ಳಿಯ ಮಹಿಳೆಯರು ಹಾಡಿದ ಹಾಡುಗಳು ಗಮನ ಸೆಳೆದವು.

ನಂತರ ಹುಬ್ಬಳ್ಳಿಯ ಅರ್ಪಿತಾ ಜಹಗೀರದಾರ ಹಾಗೂ ಶ್ರೀಕಾಂತ ಹೂಲಿ ಸಂಗಡಿಗರು ಹಾಡಿದ ಭಕ್ತಿ ಸಂಗೀತ ಆಕರ್ಷಿಸಿತು. ಉಮೇಶ ಪಾಟೀಲ ತಬಲಾ ಸಾಥ್, ಮೋಹನ ಮಾಗಡಗೇರಿ ಹಾರ್ಮೋನಿಯಂ ಸಾಥ್ ನೀಡಿದರು. ಇದಕ್ಕೂ ಪೂರ್ವ ಶಂಕರ ಭಟ್ಟ ಜೋಶಿಯವರ ನೇತೃತ್ವದಲ್ಲಿ ಹುಬ್ಬಳ್ಳಿ ಹಾಗೂ ಗದಗ ನಗರದ ಪೌರೋಹಿತರು ಪೂಜಾ ವಿಧಿ-ವಿಧಾನಗಳನ್ನು ನೆರವೇರಿಸಿದರು. ಯೋಗಿರಾಜ ಭಕ್ತ ಮಂಡಳಿಯ ಅಧ್ಯಕ್ಷ ನಾಗಾರಾಜ ಕುಲಕರ್ಣಿ, ಉಪಾಧ್ಯಕ್ಷ ಆರ್.ಡಿ. ದೇಸಾಯಿ, ದತ್ತಾತ್ರೇಯ ಜೋಶಿ ಉಪಸ್ಥಿತರಿದ್ದರು.

ನಿತ್ಯದ ಜೀವನದಲ್ಲಿ ವ್ಯಾಯಾಮ ಮುಖ್ಯ

▶▶ ಮೊದಲನೇ ಪುಟದಿಂದ

ಕಳೆದ ಬಾರಿ ಪುರುಷರ ವಿಭಾಗದಲ್ಲಿ ಸಮಗ್ರ ವೀರಾಗ್ರಣಿ ಪ್ರಶಸ್ತಿ ಪಡೆದಿದ್ದ ವೆಂಕಟೇಶ ನಾಯ್ಕ ಕ್ರೀಡಾ ಜ್ಯೋತಿಯನ್ನು ಅತಿಥಿಗಳಿಗೆ ಹಸ್ತಾಂತರಿಸಿದರು. ಆರ್‌ಪಿಐ ಮಾರುತಿ ಹೆಗಡೆ ಮುಂದಾಳತ್ವದಲ್ಲಿ ಉತ್ತರ ವಿಭಾಗ, ದಕ್ಷಿಣ ವಿಭಾಗ, ಧಾರವಾಡ ವಿಭಾಗ, ಮಹಿಳಾ ವಿಭಾಗ, ಸಂಚಾರಿ ವಿಭಾಗ ಮತ್ತು ಸಿ.ಎ.ಆರ್. ವಿಭಾಗ ತಂಡಗಳು ಆಕರ್ಷಕ ಪಥ ಸಂಚಲನ ನಡೆಸಿದವು.

ಕಾರ್ಯಕ್ರಮದಲ್ಲಿ ಡಿಸಿಪಿಗಳಾದ ರವೀಶ ಸಿ.ಆರ್., ಯಲ್ಲಪ್ಪ ಕಾಶಪ್ಪನವರ, ಪಿಟಿಎಸ್ ಪ್ರಾಚಾರ್ಯ ಎಂ.ಎಂ. ಯಾದವಾಡ, ಪೊಲೀಸ್ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು, ಕುಟುಂಬಸ್ಥರು ಉಪಸ್ಥಿತರಿದ್ದರು.

ಪೊಲೀಸ್ ಇನ್ಸಪೆಕ್ಟರ್ ಮಾರುತಿ ಗುಳ್ಳಾರಿ ನಿರೂಪಿಸಿದರು. ಡಿಸಿಪಿ ಮಹಾನಿಂಗ ನಂದಗಾವಿ ವಂದಿಸಿದರು.

ಕಾಂಗ್ರೆಸ್ ಸರ್ಕಾರದಿಂದ ರೈತಪರ ಯೋಜನೆ

▶▶ ಮೊದಲನೇ ಪುಟದಿಂದ

ರೋಣ ತಾಲೂಕಿನಲ್ಲಿ 6 ಸಾವಿರಕ್ಕೂ ಹೆಚ್ಚು ಕೃಷಿ ಹೊಂಡಗಳು ನಿರ್ಮಾಣಗೊಂಡವು. ಇದರಿಂದ ರೈತ ಸಮುದಾಯ ಒಳ್ಳೆಯ ಬೆಳೆಯನ್ನು ಬೆಳದು ಆರ್ಥಿಕ ಸುಧಾರಣೆಯನ್ನು ಕಂಡಿದ್ದಾರೆ. ಈಗ ಮತ್ತೆ ಕೃಷಿ ಹೊಂಡಗಳ ನಿರ್ಮಾಣಕ್ಕೆ ಕಾಂಗ್ರೆಸ್ ಸರಕಾರ ಮುಂದಾಗಿದೆ. ಯೋಜನೆಯ ಲಾಭ ಪಡೆದ ರೈತರು ಯಶಸ್ವೀ ಕೃಷಿಕರಾಗಿ ಲಾಭ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು. ಪುರಸಭೆಯ ಅಧ್ಯಕ್ಷೆ ಗೀತಾ ಮಾಡಲಗೇರಿ, ಉಪಾಧ್ಯಕ್ಷ ದುರುಗಪ್ಪ ಹಿರೇಮನಿ, ವಿದ್ಯಾ ದೊಡ್ಡಮನಿ, ನಾಜಬೇಗಂ ಯಲಿಗಾರ, ಬಸವರಾಜ ಜಗ್ಗಲ, ವಿ.ಬಿ. ಸೋಮನಕಟ್ಟಿಮಠ, ಸೋಮು ನಾಗರಾಜ, ಸಂಜಯ ದೊಡ್ಡಮನಿ, ಪ್ರಕಾಶ ಹೊಸಳ್ಳಿ ಸೇರಿದಂತೆ ಡಾ. ಬಿ.ಆರ್. ಅಂಬೇಡ್ಕರ್ ನಿಗಮದ ಅಧಿಕಾರಿಗಳು ಮತ್ತು ಮುಖಂಡರು ಉಪಸ್ಥಿತರಿದ್ದರು.

ಯೋಗಿರಾಜ ಮಹಾರಾಜರ ಆರಾಧನೆ ಆರಂಭ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಶಂಕರ ದೇವಸ್ಥಾನದಲ್ಲಿ ಪುಣ್ಯ ಪುರುಷ ಯೋಗಿರಾಜ ಮಹಾರಾಜರ ಆರಾಧನಾ ಮಹೋತ್ಸವವು ಹಲವು ಧಾರ್ಮಿಕ ವಿಧಿ ವಿಧಾನಗಳ ಕಾರ್ಯಕ್ರಮದೊಂದಿಗೆ ಶುಕ್ರವಾರ ಆರಂಭವಾಯಿತು.

ಯೋಗಿರಾಜರ ಆರಾಧ್ಯ ದೇವರಾಗಿರುವ ಇಲ್ಲಿಯ ಕನ್ಯೆಯರ ಬಾವಿಯಲ್ಲಿರುವ ಹನುಮಂತ ದೇವರಿಗೆ ಪೂಜೆ ಸಲ್ಲಿಸಿ ಯೋಗಿರಾಜರ ಪಾದುಕೆಯನ್ನು ಪಾಲಕಿಯಲ್ಲಿ ಮೆರವಣಿಗೆ ಮೂಲಕ ತರುವುದರೊಂದಿಗೆ ಆರಾಧನಾ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಪಾದುಕೆಯನ್ನು ಸ್ಥಾಪನೆ ಮಾಡಿ ವಿದ್ಯಾಶಂಕರ ದೇವರಿಗೆ ಲಘು ರುದ್ರಾಭಿಷೇಕ, ಮಂಜುನಾಥ ಭಟ್ಟ ದೊನ್ನಿಯವರ ನೇತೃತ್ವದಲ್ಲಿ ಗಣಪತಿ ಸಹಸ್ರ ಮೋದಕ ಹೋಮ ನೆರವೇರಿತು.

ಬೆಂಗಳೂರಿನ ಗೌರಿ ಅರುಣ ಕುಲಕರ್ಣಿ ಹಾಡಿದ ಭಕ್ತಿಗೀತೆಗಳು ಗಮನ ಸೆಳೆದರೆ, ಉಮೇಶ ಪಾಟೀಲರ ತಬಲಾ ವಾದನ ಆಕರ್ಷಿಸಿತು. ಧಾರವಾಡದ ತಾರಕೇಶ್ವರ ಭಜನಾ ಮಂಡಳ ಹಾಗೂ ಹುಬ್ಬಳ್ಳಿಯ ವಿಭಾವರಿ ಭಜನಾ ಮಂಡಳಿಯಿಂದ ವಿಶೇಷ ಭಜನಾ ಹಾಡುಗಳು ಮೊಳಗಿದವು.

ಇಲ್ಲಿಯ ಕಿರಿಯ ಪ್ರಾಥಮಿಕ ಶಾಲೆಯ ಬಾಲಕಿಯರ ಭಗವದ್ಗೀತಾ ಪಠಣವು ನೆರೆದ ಜನರನ್ನು ಆಕರ್ಷಿಸಿತು. ಈ ಬಾಲಕಿಯರಿಗೆ ಶ್ರೀ ಕೃಷ್ಣ ಭಗವದ್ಗೀತೆ ಮಂಡಳಿ ಮುಖ್ಯಸ್ಥೆ ವಿಜಯಲಕ್ಷ್ಮಿ ಕುಲಕರ್ಣಿ ತರಬೇತಿ ನೀಡಿದ್ದಾರೆ. ನಂತರ ಮಹಾನೈವೇದ್ಯ, ಮಹಾ ಮಂಗಳಾರತಿ, ಮಹಾ ಪ್ರಸಾದ, ದೀಪೋತ್ಸವ ಶೇಜಾರತಿ, ಮಂತ್ರಪುಷ್ಪ ಹಾಗೂ ಅಷ್ಟಾವಧಾನ ಸೇವೆ ನಡೆಯಿತು.

ಪತ್ರಿಕೋದ್ಯಮ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಪತ್ರಿಕೋದ್ಯಮ ಪದವೀಧರರಿಗೆ ಮಾಧ್ಯಮ ಕ್ಷೇತ್ರದಲ್ಲಿ ಮತ್ತು ಮಾಧ್ಯಮ ಚಟುವಟಿಕೆಗಳ ಕಾರ್ಯನಿರ್ವಹಣೆ ಕುರಿತು 12 ತಿಂಗಳ ಅವಧಿಯ ಅಪ್ರೆಂಟಿಸ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಡಿಸೆಂಬರ್ 10 ರವರೆಗೆ ವಿಸ್ತರಿಸಲಾಗಿದೆ.

ವಿಶೇಷ ಘಟಕ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆಯಡಿ ನೀಡುವ 12 ತಿಂಗಳ ಅಪ್ರೆಂಟಿಸ್ ತರಬೇತಿಗಾಗಿ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತ್ತಕೋತ್ತರ ಪದವಿ ಪೂರ್ಣಗೊಳಿಸಿರುವ ಹಾಗೂ ಕಂಪ್ಯೂಟರ್ ಜ್ಞಾನವಿರುವ, ಕನ್ನಡ ಭಾಷೆ ಬಳಸಲು ಪ್ರಬುದ್ಧತೆ ಇರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬೇಕು.

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳಿಗೆ 35 ವರ್ಷ ಮೀರಿರಬಾರದು. ಅರ್ಜಿ ಲಕೋಟೆಯ ಮೇಲೆ ಕಡ್ಡಾಯವಾಗಿ ವಿಶೇಷ ಘಟಕ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ನೀಡುವ ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ' ಎಂದು ನಮೂದಿಸಬೇಕು. ಆಯ್ಕೆಯಾದ ಅಭ್ಯರ್ಥಿಗಳು ಸಂದರ್ಶನದ ವೇಳೆ ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಸಲ್ಲಿಸುವುದು. ಆಯ್ಕೆಯಾಗಿ ತರಬೇತಿಗೆ ಹಾಜರಾಗುವ ಸಂದರ್ಭದಲ್ಲಿ ಮೂಲ ದಾಖಲಾತಿಗಳನ್ನು ಜಿಲ್ಲಾ ವಾರ್ತಾಧಿಕಾರಿಗಳಿಗೆ ಸಲ್ಲಿಸಬೇಕು.

ಅರ್ಜಿ ಸಲ್ಲಿಸಿದ ಸಂದರ್ಭದಲ್ಲಿ ಅಭ್ಯರ್ಥಿಗಳು ಪದವಿಯ ಎಲ್ಲ ವರ್ಷಗಳ ಅಂಕಪಟ್ಟಿಗಳು, ಸ್ನಾತ್ತಕೋತ್ತರ ಪದವಿಯ ಎಲ್ಲ ಅಂಕಪಟ್ಟಿಯೊಂದಿಗೆ ಅರ್ಜಿ ಸಲ್ಲಿಸಬೇಕು.

ತರಬೇತಿಯ ಅವಧಿ ವೇಳೆ ಮಾಹೆಯಾನ 15,000/- ರೂ. ಗಳ ಸ್ಟೈಪೆಂಡ್ ನೀಡಲಾಗುವುದು. ತರಬೇತಿಯು 2025 ರ ಜನವರಿಯಿಂದ ಡಿಸೆಂಬರ್ ವರೆಗೆ 12 ತಿಂಗಳ ಅವಧಿಯದಾಗಿದ್ದು, ತಾತ್ಕಾಲಿಕವಾಗಿರುತ್ತದೆ. ತರಬೇತಿ ಮುಗಿದ ನ

ಅತ್ಯಾಧುನಿಕ ರೂಟ್‌ಕೆನಾಲ್, ವಕ್ರದಂತ ಸೆಂಟರ್ ಪ್ರಾರಂಭ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಡಿ.ಜಿ.ಎಂ. ಆಯುರ್ವೇದಿಕ್ ಮೆಡಿಕಲ್ ಕಾಲೇಜ ಹಾಗೂ ಶ್ರೀ ಜಗದ್ಗುರು ಶಿವಾನಂದ ಆಸ್ಪತ್ರೆಯಲ್ಲಿ ದಂತ ಚಿಕಿತ್ಸಾ ವಿಭಾಗದಲ್ಲಿ ಅತ್ಯಾಧುನಿಕ ತಂತ್ರಜ್ಞಾನವನ್ನೊಳಗೊಂಡ ರೂಟ್‌ಕೆನಾಲ್ ಸ್ಪೇಷಾಲಿಟಿ ಮತ್ತು ವಕ್ರದಂತ (ಹಲ್ಲಿನ ಕ್ಲಿಪ್) ಸ್ಪೇಷಾಲಿಟಿ ವಿಭಾಗವನ್ನು ಪ್ರಾರಂಭಿಸಲಾಗಿದೆ. ಈ ಸ್ಪೆಷಾಲಿಟ್ ವಿಭಾಗದಲ್ಲಿ ಇಂಪ್ಲಾಟ್ ಅಳವಡಿಸಿ, ಹಲ್ಲು ಮತ್ತು ಹಲ್ಲಿನ ಸೆಟ್‌ಗಳನ್ನು ಅಳವಡಿಸುವುದು, ಅತ್ಯಾಧುನಿಕ ರೂಟ್‌ಕೆನಾಲ್ ಚಿಕಿತ್ಸೆ, ಫಿಕ್ಸಡ್ ಹಲ್ಲುಗಳನ್ನು ಕೂಡಿಸುವುದು, ಹಲ್ಲುಗಳಿಗೆ ಬೆಳ್ಳಿ, ಸಿಮೆಂಟ್, ಕಾಂಪೋಜಿಟ್ ತುಂಬುವುದು, ಹಲ್ಲುಗಳ ಮೇಲಿನ ಫ್ಲೋರೋಸಿಸ್ ಹಾಗೂ ಗುಟ್ಕಾ, ಎಲೆ-ಅಡಿಕೆ, ತಂಬಾಕಿನ ಕಲೆಗಳನ್ನು ತೆಗೆಯುವುದು, ವಕ್ರವಾಗಿರುವ ಹಲ್ಲುಗಳಿಗೆ ತಂತಿ ಅಳವಡಿಸಿ ಅಚ್ಚುಕಟ್ಟಾಗಿ ಹೊಂದಿಸುವುದು, ಬಾಯಿ, ದವಡೆ, ವಸಡಿನ ಕ್ಯಾನ್ಸರನ್ನು ಆರಂಭಿಕ ಹಂತದಲ್ಲಿ ಪತ್ತೆ ಹಚ್ಚುವುದು ಹಾಗೂ ಸಲಹೆ-ಸೂಚನೆಗಳನ್ನು ಕೊಡಲಾಗುವುದು. ಈ ವಿಭಾಗದಲ್ಲಿ ದಂತ ತಜ್ಞರಾದ ಡಾ. ವೈಶಾಖ ಜೆ. ಕುಷ್ಟಗಿ, ಡಾ. ನವೀನ ಸಿ.ಹಿರೇಗೌಡರ, ಡಾ. ಆದಿತಿ ವೈ ಭಜಂತ್ರಿ, ಡಾ. ಬೃಂದಾ ಕೆ.ಶಿವಪೂರ, ಡಾ. ಸೌಜನ್ಯ ಎಸ್.ಪಟ್ಟೇದ, ಡಾ. ಕಾರ್ತಿಕ ಕೆ. ಶಿವಪೂರ ತಂಡ ಕಾರ್ಯನಿರ್ವಹಿಸುತ್ತಿದೆ.

ವಾರದ ಪ್ರತಿ ದಿನ ಬೆಳಿಗ್ಗೆ 9ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಸೌಲಭ್ಯವಿದ್ದು, ರವಿವಾರ ರಜೆ ಇರುತ್ತದೆ. ಗದಗ ಜಿಲ್ಲೆಯ ಸಾರ್ವಜನಿಕರು ಮೇಲ್ಕಂಡ ಎಲ್ಲ ಸೌಲಭ್ಯಗಳ ಸದುಪಯೋಗ ಪಡೆದುಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಡಾ. ಬಸವರಾಜ ಆರ್.ರಾಜಾಪೂರ-ಮೊ: 9448103821 ಇವರನ್ನು ಸಂಪರ್ಕಿಸಬಹುದೆಂದು ಪ್ರಾಚಾರ್ಯ ಡಾ. ಸಂತೋಷ ಎನ್.ಬೆಳವಡಿ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

ವಾ.ಕ.ರ.ಸಾ ಸಂಸ್ಥೆಯ ಕನ್ನಡ ಕ್ರಿಯಾ ಸಮಿತಿಯಿಂದ ಕರ್ನಾಟಕ ರಾಜ್ಯೋತ್ಸವ ಸಂಭ್ರಮ

ಕನ್ನಡ ಅನುಷ್ಠಾನಕ್ಕೆ ಬದ್ಧರಾಗೋಣ

■ ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ಭಾಷೆಯ ಸೊಬಗು ಸೊಗಸಾದುದು. ಸಮೃದ್ಧಗೊಂಡಿರುವ ಕನ್ನಡವನ್ನು ನೂರಕ್ಕೆ ನೂರರಷ್ಟು ಅನುಷ್ಠಾನಗೊಳಿಸಲು ನಾವು ಬದ್ಧರಾಗಬೇಕಿದೆ ಎಂದು ವಾಕರಸಾ ಸಂಸ್ಥೆಯ ಹುಬ್ಬಳ್ಳಿ ಕೇಂದ್ರ ಕಚೇರಿಯ ಮುಖ್ಯ ಕಾರ್ಮಿಕ ಕಲ್ಯಾಣ ಅಧಿಕಾರಿ ಪಿ.ವೈ. ನಾಯಕ ಅಭಿಪ್ರಾಯಪಟ್ಟರು.

ಅವರು ಶನಿವಾರ ಗದುಗಿನ ಕುಮಾರೇಶ್ವರ ಪಾಠಶಾಲೆಯ ಸಭಾಭವನದಲ್ಲಿ ಗದಗ ವಿಭಾಗದ ವಾ.ಕ.ರ.ಸಾ ಸಂಸ್ಥೆಯ ಕನ್ನಡ ಕ್ರಿಯಾ ಸಮಿತಿ ಕರ್ನಾಟಕ ರಾಜ್ಯೋತ್ಸವ ಸಂಭ್ರಮದ ಅಂಗವಾಗಿ ಏರ್ಪಡಿಸಿದ್ದ 'ಕರುನಾಡು ಸಾಂಸ್ಕೃತಿಕ ಉತ್ಸವ'ವನ್ನು ಉದ್ಘಾಟಿಸಿ ಮಾತನಾಡಿದರು.

ಸಾರಿಗೆ ಸಂಸ್ಥೆಯು ತನ್ನ ಆಡಳಿತ ಸಂಪರ್ಕ ವ್ಯವಹಾರದಲ್ಲಿ ಶೇ. ನೂರಕ್ಕೆ ನೂರರಷ್ಟು ಕನ್ನಡವನ್ನು ಅಳವಡಿಸಿಕೊಂಡಿದೆ. ಇದರೊಟ್ಟಿಗೆ ವಾಕರಸಾ ಸಂಸ್ಥೆಯ ಕನ್ನಡ ಕ್ರಿಯಾ ಸಮಿತಿಯೂ ಸಾಥ್ ನೀಡುತ್ತಿದ್ದು, ಕನ್ನಡ ಅನುಷ್ಠಾನ ಸಮಿತಿಯೂ ಸಹ ಈ ಕುರಿತು ನಿಗಾ ವಹಿಸಿದೆ ಎಂದರು.

ಬೆಳಗಾವಿ ಭಾಗದಲ್ಲಿ ಕನ್ನಡ ಭಾಷೆಯ ಮೇಲೆ ಮರಾಠಿ ಭಾಷೆ ಕೊಂಚ ಪ್ರಭಾವ ಬೀರುವ ಹಾಗೆ ಗದಗ ಪರಿಸರದಲ್ಲಿ ಆ ರೀತಿಯ ಪ್ರಭಾವ ಇಲ್ಲ. ಹೀಗಾಗಿ ಗದಗ ಜಿಲ್ಲೆಯಲ್ಲಿ ಕನ್ನಡ ಭಾಷೆ ತನ್ನ ಹೊಳಪನ್ನು ಇನ್ನಷ್ಟು ಹೆಚ್ಚಿಸಿಕೊಳ್ಳುತ್ತಿದೆ. ಸಂಸ್ಥೆಯಲ್ಲಿ

ಕನ್ನಡ ಕ್ರಿಯಾ ಸಮಿತಿಯ ಕ್ರಿಯಾಶೀಲತೆಯ ಸಾಹಿತ್ಯಿಕ ಕಾರ್ಯ ಚಟುವಟಿಕೆಗಳು ಭಾಷೆಯ ಸಮೃದ್ಧಿಯನ್ನು ದ್ವಿಗುಣಗೊಳಿಸುತ್ತಿದೆ. ಈ ಕಾರಣಕ್ಕಾಗಿ ಸಮಿತಿಯ ಕ್ರಿಯಾಶೀಲ ಪದಾಧಿಕಾರಿಗಳು, ಕನ್ನಡ ಮನಸ್ಸುಗಳು ಅಭಿನಂದನಾರ್ಹರು ಎಂದರು.

ಗದಗ ವಿಭಾಗವು ಕರ್ನಾಟಕ ರಾಜ್ಯೋತ್ಸವ, ಗಣರಾಜ್ಯೋತ್ಸವ, ಸ್ವಾತಂತ್ರ್ಯೋತ್ಸವದ ಸಂದರ್ಭದಲ್ಲಿ ಸ್ತಬ್ಧ ಚಿತ್ರ, ಅಲಂಕೃತ ವಾಹನದ ರೂಪಕಗಳು ಜಿಲ್ಲಾಡಳಿತದ ಮೆಚ್ಚುಗೆ ಪಾತ್ರವಾಗಿರುವದು ಶ್ಲಾಘನೀಯ. ಅದಕ್ಕೆ ಶ್ರಮಿಸಿದ ಸಂಸ್ಥೆಯ ತಂತ್ರಜ್ಞ ಕಲಾವಿದರು ಅಭಿನಂದನಾರ್ಹರು. ಸಂಸ್ಥೆಯ ಸಿಬ್ಬಂದಿ ಸಂಗೀತ, ಸಾಹಿತ್ಯ, ಸಾಂಸ್ಕೃತಿಕ ಕಾರ್ಯ ಚಟುವಟಿಕೆಗಳಲ್ಲೂ ಮುಂಚೂಣಿಯಲ್ಲಿರುವದು ಸಂಸ್ಥೆಯ ಹಿರಿಯೆಯನ್ನು ಹೆಚ್ಚಿಸಿದೆ ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ಸಂಸ್ಥೆಯ ಗದಗ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿ ಡಿ.ಎಂ. ದೇವರಾಜ ವಹಿಸಿದ್ದರು. ವಿಶೇಷ ಆಹ್ವಾನಿತರಾಗಿ ಕನ್ನಡ ಕ್ರಿಯಾ ಸಮಿತಿಯ ಹುಬ್ಬಳ್ಳಿ ವಲಯ ಅಧ್ಯಕ್ಷ ಗಂಗಾಧರ ಕಮಲದಿನ್ನಿ ಆಗಮಿಸಿದ್ದರು.

ವೇದಿಕೆಯ ಮೇಲೆ ಕಿರಣಕುಮಾರ ಬಸಾಪೂರ, ವಿಜಯಕುಮಾರ ಕುಮಠಳ್ಳಿ, ಆರ್.ಎಲ್. ಕಾಶೀಗೌಡ್ರ, ಬಿ.ಎಲ್. ಗೆಣ್ಣೂರ, ರಿಟಾ ಮಿರಜಕರ, ಮಲ್ಲಿಕಾರ್ಜುನ ಬುಡಕನಹಳ್ಳಿ, ಮಲ್ಲಿಕಾರ್ಜುನ ನವಲಗುಂದ, ಕಾರ್ಮಿಕ ಮುಖಂಡರಾದ ಶಾಂತಣ್ಣ ಮುಳವಾಡ, ಬಿ.ಎಚ್. ರಾಮೇನಹಳ್ಳಿ, ಎಂ.ಆಂಜನೇಯ, ಎಚ್.ಸಿ. ಕೊಪ್ಪಳ, ಎಂ.ಎಚ್. ಪೂಜಾರ, ಆಂಜನೇಯ ಕುಂಬಾರ, ವಿಭಾಗದ ಎಲ್ಲ ಘಟಕಗಳ ಘಟಕ ವ್ಯವಸ್ಥಾಪಕರು ಉಪಸ್ಥಿತರಿದ್ದರು.

ಸಮಾರಂಭದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಂಸ್ಥೆಯ ನೌಕರರನ್ನು ಸನ್ಮಾನಿಸಲಾಯಿತು. ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಸಂತೋಷ ಕುಲಕರ್ಣಿ ಸ್ವಾಗತಿಸಿ ಪರಿಚಯಿಸಿದರು. ಅಮೃತೇಶ ಹೊಸಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸುನೀಲ ದಾಮೋದರ ಹಾಗೂ ಬಸಮ್ಮ ನಿರೂಪಿಸಿದರು. ಆರ್.ಎಲ್. ಕಾಶೀಗೌಡ್ರ ವಂದಿಸಿದರು.

ಮುಖ್ಯ ಅತಿಥಿ, ಜಿಲ್ಲಾ ಕ.ಸಾ.ಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಕರ್ನಾಟಕ ಗತವೈಭವಕ್ಕೆ ಗದಗ ಪರಿಸರದ ಕೊಡುಗೆ ಅನುಪಮವಾದದ್ದು. ಅಂತಹ ಅಪ್ಪಟ ಕನ್ನಡಿಗರ ಪುಣ್ಯ ನೆಲವಿದು.

ಕನ್ನಡ ನಾಡು, ನುಡಿ, ಸಂಸ್ಕೃತಿಗೆ ಗದಗ ಪರಿಸರದ ಅನುಪಮ ಕೊಡುಗೆಯನ್ನು ಬಣ್ಣಿಸಿದರಲ್ಲದೆ, ಆಲೂರ ವೆಂಕಟರಾಯರು, ಹುಯಿಲಗೋಳ ನಾರಾಯಣರಾಯರು, ಅಂದಾನಪ್ಪ ದೊಡ್ಡಮೇಟಿ, ಕಲಾವಿದ ಸಿ.ಎನ್. ಪಾಟೀಲರನ್ನು ಒಳಗೊಂಡಂತೆ ಎಲ್ಲ ದಾರ್ಶನಿಕರನ್ನು ನೆನೆದರು.

ಬೇಡಿಕೆ ಈಡೇರಿಕೆಗೆ ಆಶಾ ಕಾರ್ಯಕರ್ತೆಯರ ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

ಆಶಾ ಕಾರ್ಯಕರ್ತೆಯರಿಗೆ ಕೇಂದ್ರ ಸರ್ಕಾರದ ಪ್ರೋತ್ಸಾಹ ಧನ, ರಾಜ್ಯ ಸರ್ಕಾರದ ನಿಶ್ಚಿತ ಮಾಸಿಕ ಗೌರವಧನ ಹಾಗೂ ಪ್ರಣಾಳಿಕೆಯ ಭರವಸೆಯ ಮೊತ್ತ ಒಟ್ಟುಗೂಡಿಸಿ 15 ಸಾವಿರ ರೂ ಮಾಸಿಕ ನಿಶ್ಚಿತ ಗೌರವಧನ ನೀಡಬೇಕು ಎನ್ನುವ ಬಹುದಿನಗಳ ಬೇಡಿಕೆಯೂ ಸೇರಿದಂತೆ ಇನ್ನಿತರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಕೆಗೆ ಬೆಳಗಾವಿ ಅಧಿವೇಶನದಲ್ಲಿ ಸರ್ಕಾರವನ್ನು ಒತ್ತಾಯಿಸಬೇಕೆಂದು ಕೋರಿ ಆಶಾ ಕಾರ್ಯಕರ್ತೆಯರು

ಸಚಿವ ಎಚ್.ಕೆ. ಪಾಟೀಲರಿಗೆ ಮನವಿ ಸಲ್ಲಿಸಿದರು.

ಹಗಲಿರುಳು ಬಡಜನರಿಗೆ ಆರೋಗ್ಯ ಸೌಲಭ್ಯಗಳನ್ನು ಒದಗಿಸಿಕೊಡಲು ಆರೋಗ್ಯ ಇಲಾಖೆಯಲ್ಲಿ ಪರಿಶ್ರಮಿಸುತ್ತಿದ್ದೇವೆ. ರಾಜ್ಯದಲ್ಲಿ ಸುಮಾರು 42 ಸಾವಿರ ಆಶಾ ಕಾರ್ಯಕರ್ತೆಯರು ಮಹತ್ತರವಾದ ಕೆಲಸಗಳನ್ನು ನಿರ್ವಹಿಸುತ್ತಿದ್ದಾರೆ. ಆದರೆ ಆಶಾ ಕಾರ್ಯಕರ್ತರ ಶ್ರಮಕ್ಕೆ ತಕ್ಕ ಪ್ರತಿಫಲ ಸಿಗುತ್ತಿಲ್ಲ. ಸಮಸ್ಯೆಗಳ ಕುರಿತು ಆರೋಗ್ಯ ಇಲಾಖೆ ಮತ್ತು ಸರ್ಕಾರಕ್ಕೆ ಕಳೆದ 8 ವರ್ಷಗಳಿಂದ ದೂರುಗಳನ್ನು ಸಲ್ಲಿಸಲಾಗಿದೆ. ಈ ಸಮಸ್ಯೆಯನ್ನು ಪರಿಹರಿಸಲು ಡಿಸೆಂಬರ್ 9ರಿಂದ ಬೆಳಗಾವಿಯಲ್ಲಿ ಆರಂಭವಾಗಲಿರುವ ಚಳಿಗಾಲದ ಅಧಿವೇಶನದಲ್ಲಿ ಈ ವಿಷಯವನ್ನು ಚರ್ಚಿಸಿ ಸರ್ಕಾರದ ಗಮನ ಸೆಳೆದು ಆಶಾ ಕಾರ್ಯಕರ್ತೆಯರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಲು ಸರ್ಕಾರವನ್ನು ಆಗ್ರಹಿಸಬೇಕೆಂದು ಕೋರಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಆಶಾ ಸಂಘದ ಜಿಲ್ಲಾ ಅಧ್ಯಕ್ಷೆ ಭಾಗ್ಯಜ್ಯೋತಿ ಹಡಪದ, ಜಿಲ್ಲಾ ಕಾರ್ಯದರ್ಶಿ ಲಕ್ಷ್ಮೀ ಪೂಜಾರ್, ಜಿಲ್ಲಾ ಉಪಾಧ್ಯಕ್ಷೆ ಪ್ರೇಮ ಪಾಟೀಲ್, ಅನ್ನಪೂರ್ಣ ಕಟವ, ಜಿಲ್ಲಾ ಸಮಿತಿ ಸದಸ್ಯರಾದ ಬಸವಣ್ಣೆಮ್ಮಾ ಓಲೇಕಾರ್, ಗೌರಿ, ಶಾಹೀನ, ಗೀತ ಭಜಂತ್ರಿ ಸೇರಿದಂತೆ ಆಶಾ ಕಾರ್ಯಕರ್ತೆಯರಿದ್ದರು.

ಕರ್ನಾಟಕ ರಾಜ್ಯ ನೌಕರರ ಸಂಘದ ಗದಗ ಜಿಲ್ಲಾ ಅಧ್ಯಕ್ಷರಾಗಿ ಸತತ 3ನೇ ಬಾರಿಗೆ ಅವಿರೋಧವಾಗಿ ಆಯ್ಕೆಯಾದ ಹಿಂದುಳಿದ ವರ್ಗಗಳ ಜಿಲ್ಲಾಧಿಕಾರಿ ರವಿ ಎಲ್.ಗುಂಜೀಕರ ಅವರನ್ನು ಗದಗ ಜಿಲ್ಲಾ ಬಿಜೆಪಿ ಪ್ರಕೊಷ್ಠಗಳ ಸಹ ಸಂಯೋಜಕ ರಮೇಶ ಎನ್.ಸಜ್ಜಗಾರ, ಅಶೋಕ ಕುಡುತನಿ, ಕಾನೂನು ಪ್ರಕೊಷ್ಠದ ಜಿಲ್ಲಾ ಸಂಚಾಲಕ ಕೆ.ಪಿ. ಕೊಟ್ಟಿಗೌಡ್ರ, ಗ್ರಾಮೀಣ ಮುಖಂಡರಾದ ಬೂದಪ್ಪ ಹಳ್ಳಿ, ವಕೀಲಾರದ ಮಂಜುನಾಥ ಶಾಂತಗೇರಿ, ನಾಗರಾಜ್ ಅಬ್ಬಿಗೇರಿ, ರಾಜು ಹೊಂಗಲ್ ಸನ್ಮಾನಿಸಿ ಗೌರವಿಸಿದರು.

ಶ್ರೀ ರಾಮಕರುಣಾನಂದರ ಚರಿತ್ರೆ ಕೃತಿ ಬಿಡುಗಡೆ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಬಿಂಕದಕಟ್ಟಿಯ ತಪಸ್ವಿ ಶ್ರೀ ರಾಮಕರುಣಾನಂದ ಮಹಾರಾಜರ ಚರಿತ್ರೆ ಕೃತಿ ಶನಿವಾರ ಬಿಡುಗಡೆಗೊಂಡಿತು. ಬಿಂಕದಕಟ್ಟಿಯ ಶ್ರೀ ರಾಮಕರುಣಾನಂದ ರಂಗ ಮಂದಿರದಲ್ಲಿ ನಡೆದ ಸಮಾರಂಭದಲ್ಲಿ ಜೆ.ಕೆ. ಜಮಾದಾರ ಬರೆದ ಕೃತಿಯನ್ನು ಕಾನೂನು ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಎಚ್ .ಕೆ. ಪಾಟೀಲ ಬಿಡುಗಡೆಗೊಳಿಸಿದರು.

ಸಾನ್ನಿಧ್ಯವನ್ನು ಹೊಸಳ್ಳಿಯ ಅಭಿನವ ಬೂದೀಶ್ವರ ಸ್ವಾಮೀಜಿ ವಹಿಸಿದ್ದರು. ನೀಲಮ್ಮ ತಾಯಿ ಅಸುಂಡಿ ಆಶೀರ್ವಚನ ನೀಡಿದರು. ಸಮಾರಂಭದಲ್ಲಿ ಸಾಹಿತಿ ಜಮಾದಾರ ಅವರನ್ನು ಸಚಿವರು ಸನ್ಮಾನಿಸಿದರು.

ಕೃತಿ ರಚನೆಗೆ ಸಹಕಾರ ನೀಡಿದ ಆರ್ ಎಮ್. ಮೂಲಿಮನಿ. ಕೆ. ಎಚ್. ನಡುವಿನಮನಿ, ಎಚ್. ಎಮ್. ಮೂಲಿಮನಿ. ಆರ್. ಆರ್. ಕೆಂಚನಗೌಡ್ರ, ಡಿ. ಬಿ. ತಿರ್ಲಾಪೂರ ಹಾಗೂ ವ್ಹಿ. ಡಿ. ರಂಗಪ್ಪನವರ ಅವರಿಗೆ ಅಭಿನಂದನೆ ಸಲ್ಲಿಸಲಾಯಿತು.

ಮಾಜಿ ಶಾಸಕ ಡಿ.ಆರ್. ಪಾಟೀಲ, ಜಿಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರುಡಗಿ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ ಬಬರ್ಚಿ ಹಾಗೂ ಗ್ರಾಮದ ಗುರು ಹಿರಿಯರು ಉಪಸ್ಥಿತರಿದ್ದರು.

ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕೆ.ಎಲ್.ಇ ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಎನ್. ಎಸ್.ಎಸ್. ಘಟಕದ ಮತ್ತು ಮಹಿಳಾ ಸಬಲೀಕರಣ ಕೋಶದ ವತಿಯಿಂದ ಹಾತಲಗೇರಿ ಗ್ರಾಮದ ಉನ್ನತೀಕರಿಸಿದ ಸರಕಾರಿ ಪ್ರೌಢಶಾಲೆಯಲ್ಲಿ ಬಾಲ್ಯ ವಿವಾಹದ ಬಗ್ಗೆ ಮಕ್ಕಳಿಗೆ ಅರಿವು ಮೂಡಿಸಲಾಯಿತು.

ಎನ್. ಎಸ್. ಎಸ್. ಸ್ವಯಂ ಸೇವಕರಾದ ರಂಜಿತಾ ಎಸ್ ಮಾತನಾಡಿ, ಬಾಲ್ಯ ವಿವಾಹದಿಂದ ಹೆಣ್ಣುಮಕ್ಕಳ ಆರೋಗ್ಯದ ಮೇಲೆ

ಪರಿಣಾಮ ಬೀರುತ್ತದೆ ಎಂದರು. ಬಸನಗೌಡ ಕಾಶೀಗೌಡರ ಮಾತನಾಡಿ, ಈ ಬಾಲ್ಯ ವಿವಾಹಕ್ಕೆ ಮುಖ್ಯ ಕಾರಣ ಬಡತನ, ಅನಕ್ಷರತೆಯಾಗಿದೆ. ಬಾಲ್ಯ ವಿವಾಹ ಮಾಡುವವರಿಗೆ 1 ಲಕ್ಷ ರೂ ದಂಡ ಮತ್ತು ಜೈಲು ಶಿಕ್ಷೆಯಿದೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಕೆ.ಎಲ್.ಇ ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಎನ್. ಎಸ್.ಎಸ್. ಘಟಕದ ಸಹ ಕಾರ್ಯಕ್ರಮಾಧಿಕಾರಿ ಪ್ರೊ. ವೀರಣ್ಣ ಬಡಿಗೇರ, ಮಹಿಳಾ ಸಬಲೀಕರಣ ಕೋಶದ ವತಿಯಿಂದ ಪ್ರೊ. ವಿಶಲಾ ತೆಳಗಡೆ, ಪ್ರೊ. ಗೌರಾ ವಾಯ್., ಎನ್.ಎಸ್.ಎಸ್. ತಂಡದ ನಾಯಕರಾದ ಆಕಾಶ ಕಳಗಣ್ಣವರ, ಫಕ್ಕೀರೇಶ ಒಂಟಿ, ರಂಜಿತಾ ಎಸ್., ಅಕ್ಷತಾ ದೊಡ್ಡಮನಿ, ಹಾತಲಗೇರಿ ಗ್ರಾಮದ ಉನ್ನತೀಕರಿಸಿದ ಸರಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಗೀತಾ ಕಟಗಿ, ಶಿಕ್ಷಕರಾದ ಲಿಂಗನಗೌಡ ಪಾಟೀಲ, ದೈಹಿಕ ಶಿಕ್ಷರಾದ ಸವಿತಾ ಅಮರಶೆಟ್ಟಿ, ಎನ್. ಎಸ್.ಎಸ್. ಘಟಕದ ಸ್ವಯಂ ಸೇವಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ರಾಜ್ಯ ಮಟ್ಟದ ಕಲಾಶ್ರೀ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ಕೃಷ್ಣಪ್ರಿಯಾ

■ ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ರಾಜ್ಯ ಬಾಲಭವನ ಸೊಸೈಟಿಯ ಸಹಯೋಗದಲ್ಲಿ ಶುಕ್ರವಾರ ಬೆಂಗಳೂರಿನ ರಾಜ್ಯ ಬಾಲ ಭವನ ಸೊಸೈಟಿಯಲ್ಲಿ ನಡೆದ ರಾಜ್ಯ ಮಟ್ಟದ ಕಲಾಶ್ರೀ ಸ್ಪರ್ಧೆಯಲ್ಲಿ ಶಾಸ್ತ್ರೀಯ ಸಂಗೀತದಲ್ಲಿ ಗದಗನ ಕೃಷ್ಣಪ್ರಿಯಾ ಬದಿ ಪ್ರಥಮ ಸ್ಥಾನ ಪಡೆದಿದ್ದಾಳೆ. ವಾದ್ಯ ಸಂಗೀತದಲ್ಲಿ (ಕೊಳಲು) ಕುಮಾರಿ ಭಾಗ್ಯ ವಿಭೂತಿ ದ್ವಿತೀಯ ಸ್ಥಾನ ಪಡೆದಿದ್ದಾಳೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವರಾದ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಸ್ಪರ್ಧೆಯಲ್ಲಿ ವಿಜೇತರಿಗೆ ಕಲಾಶ್ರೀ ಪ್ರಶಸ್ತಿಯನ್ನು ವಿತರಿಸಿದರು.

ಪ್ರಶಸ್ತಿ ಪಡೆದಂತಹ ವಿಜೇತರಿಗೆ ಶನಿವಾರ ಜಿಲ್ಲಾ ಬಾಲಭವನ ಅಧ್ಯಕ್ಷರು ಹಾಗೂ ಗದಗ ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಭರತ್ ಎಸ್ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಪದ್ಮಾವತಿ ಜಿ ಅವರು ಅಭಿನಂದಿಸಿದ್ದಾರೆ.

ಶ್ರೀ ಗಂಜೀ ಬಸವೇಶ್ವರ ಕಾರ್ತಿಕೋತ್ಸವ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಉಸಗಿನಗಟ್ಟಿ ಓಣಿಯ ಶ್ರೀ ಗಂಜೀ ಬಸವೇಶ್ವರ ದೇವಸ್ಥಾನದಲ್ಲಿ ಡಿ.1, ಅಮವಾಸ್ಯೆಯಂದು ಸಾಯಂಕಾಲ ಕಾರ್ತಿಕೋತ್ಸವ ಕಾರ್ಯಕ್ರಮ ಜರುಗಲಿದೆ. ಈ ಕಾರ್ಯಕ್ರಮಕ್ಕೆ ಸಕಲ ಸದ್ಭಕ್ತರು ಭಾಗವಹಿಸಿ ಬಸವಣ್ಣ ದೇವರ ಕೃಪೆಗೆ ಪಾತ್ರರಾಗಬೇಕೆಂದು ಓಣಿಯ ಗುರು-ಹಿರಿಯರು, ಗಂಜಿ ಬಸವೇಶ್ವರ ಟ್ರಸ್ಟ್ ಕಮಿಟಿಯ ಸರ್ವ ಸದಸ್ಯರು ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

ಕಾರ್ತಿಕ ಕೊನೆಯ ದೀಪೋತ್ಸವ ಇಂದ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಐತಿಹಾಸಿಕ ಪ್ರಸಿದ್ಧ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಡಿ.ರಂದು ಭಟ್ಟಿ ಅಮವಾಸ್ಯೆ ದಿನ ಸಂಜೆ 7 ಗಂಟೆಗೆ ಕಾರ್ತಿಕ ಮಾಸದ ಕೊನೆಯ ದೀಪೋತ್ಸವ ಕಾರ್ಯಕ್ರಮ ನಡೆಯಲಿದೆ ಎಂದು ಅರ್ಚಕ ರಾಘವೇಂದ್ರ ಪೂಜಾರ ತಿಳಿಸಿದ್ದಾರೆ. ಸಂಜೆ 7 ಗಂಟೆಗೆ ಆರಂಭವಾಗುವ ದೀಪೋತ್ಸವ ಕಾರ